MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 77 | ಗುರುವಾರ : 08-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 77 | THURSDAY : 08-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

ಲೋಪಗಳ ಪರಿಶೀಲಿಸಿ ವರದಿ ನೀಡಲು ಜಿಲ್ಲಾಮಟ್ಟದ ಅಧಿಕಾರಿಗಳಿಗ ಸೂಚನೆ

## 61 ಕಡೆಗಳಲ್ಲಿ ಅನಿರೀಕ್ಷಿತ ಭೇಟಿ ನೀಡಿದ ಲೋಕಾದಾಳಿ ವರದಿ ಬಿಚ್ಚಿಟ್ಟ ಅಧಿಕಾರಿಗಳು



ಯುವಮಾರ್ಗ ಸುದ್ದಿ

**ರಾಯಚೂರು ಜ,7–** ಕರ್ನಾಟಕ ಲೋಕಾಯುಕ್ತರಾದ ಗೌರವಾನ್ವಿತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರ ನಿರ್ದೇಶನದ ಮೇರೆಗೆ ಲೋಕಾಯುಕ್ತ ಅಧಿಕಾರಿಗಳ ತಂಡವು ರಾಯಚೂರು ಜಿಲ್ಲೆಯ 14 ವಸತಿ ನಿಲಯಗಳು ಸೇರಿದಂತೆ ವಿವಿಧ 61 ಕಡೆಗೆ ಭೇಟಿ ನೀಡಿ ಪರಿಶೀಲಿಸಿದ ವೇಳೆ ಕಂಡು ಬಂದ ಲೋಪಗಳ ಬಗ್ಗೆ ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರ ಕಾರ್ಯದರ್ಶಿಗಳಾದ ಶ್ರೀನಾಥ ಕೆ ಹಾಗೂ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಗೌರವಾನ್ವಿತ ಎ.ವಿ.ಪಾಟೀಲ ಅವರು ಜಿಲ್ಲಾಮಟ್ಟದ ಅಧಿಕಾರಿಗಳ ಗಮನಕ್ಕೆ ತಂದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಗೌರವಾನ್ವಿತ ಎ.ವಿ.ಪಾಟೀಲ ಅವರು, ರಾಯಚೂರು ನಗರ ಸೇರಿದಂತೆ ವಿವಿಧ ತಾಲೂಕುಗಳಲ್ಲಿನ 61 ಕಚೇರಿಗಳಿಗೆ ತಂಡವು ಭೇಟಿ ನೀಡಿ ಕಡತ ಪರಿಶೀಲನೆ ಮಾಡಿ ಲೋಪಗಳನ್ನು ಪಟ್ಟಿ ಮಾಡಲಾಗಿದೆ ಎಂದು ತಿಳಿಸಿದರು.

61 ಕಡೆಗಳಲ್ಲಿ ಭೇಟಿ ನೀಡಿದ ಬಗ್ಗೆ ಕಾರ್ಯದರ್ಶಿಗಳು ಹಾಗೂ ಅಪರ ನಿಬಂಧಕರು ಮಾತನಾಡಿ, ತಂಡವು ಮೊದಲಿಗೆ ಮಹಾನಗರ ಪಾಲಿಕೆಗೆ ಭೇಟಿ ನೀಡಿದಾಗ, ಅನಧೀಕೃತ ಕಟ್ಟಡಗಳಿಗೆ ಬಗ್ಗೆ ಯಾವುದೇ ರೀತಿಯ ರಿಜಿಸ್ಟರ್ ಇರಲಿಲ್ಲ. ತನಿಖೆಗೆ ಬೇಕಾದ ಮಾಹಿತಿ ಒದಗಿಸಲು ಕೆಲವರು ವಿಫಲರಾದರು. 69 ಕಸ ವಿಲೇವಾರಿ ವಾಹನಗಳ ಲಾಗ್ ಬುಕ್ ನಿರ್ವಹಣೆ ಮಾಡಿರಲಿಲ್ಲ. ಲಿಂಗಸೂರ ಪುರಸಭೆಯಲ್ಲಿ ಅವ್ಯವಸ್ಥೆ ಕಾಣಸಿತು. ದೇವದುರ್ಗ ಪುರಸಭೆಯ ವಾಹನಗಳ ಲಾಗ್ ಬುಕ್ ಸರಿ ಇರಲಿಲ್ಲ. ಕಸ ವಿಲೇವಾರಿ ವ್ಯವಸ್ಥೆ ಅಸಮರ್ಪಕವಾಗಿದ್ದು ಕಂಡು ಬಂದಿತು. ಸಿಂಧನೂರ ನಗರಸಭೆಯಲ್ಲಿ ಘನತ್ಯಾಜ್ಯದ ಖರ್ಚು ವೆಚ್ಚ ನಿರ್ವಹಣೆ ಸರಿಯಾಗಿರಲಿಲ್ಲ. ರಾಮದುರ್ಗ ಗ್ರಾಪಂಗೆ ಹಂಚಿಕೆಯಾದ ಕಸ ವಿಲೇವಾರಿ ವಾಹನದ ಕಡತ ಸಮರ್ಪಕವಾಗಿರಲಿಲ್ಲ ಎಂದು ತಿಳಿಸಿದರು.

ದೇವದುರ್ಗ ತಹಸೀಲ್ ಕಚೇರಿಯಲ್ಲಿ ಬಯೋ ಮೆಟ್ರಿಕ್ ಇದ್ದರೂ ಅದನ್ನು ಬಳಸಿಲ್ಲ. ಲೋಕಾಯುಕ್ತ ಫಲಕ ಹಾಕಿರಲಿಲ್ಲ. ಸಿಂಧನೂರ ತಹಸೀಲ್ ಕಚೇರಿಯಲ್ಲಿ ಆರ್‌ಟಿಐ ಅರ್ಜಿ, ತಿದ್ದುಪಡಿ ಹಾಗೂ ಇನ್ನಿತರ ಅರ್ಜಿ ವಿಲೇ ಮಾಡಿಲ್ಲ. ತಹಸೀಲ್ದಾರ್ ಮತ್ತು ಎಡಿಎಲ್‌ಆರ್ ಮಧ್ಯೆ ಅಸಮನ್ವಯ ಕಾಣಿಸಿತು. ಸಿಂಧನೂರ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಕೆಲ ವಹಿಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿಲ್ಲ ಎಂದು ತಿಳಿಸಿದರು.

ಅಬಕಾರಿ ಇಲಾಖೆಯಲ್ಲಿ 2020–21ರಿಂದ ಕೆಲ ಅರ್ಜಿಗಳು ಬಾಕಿ ಇರುವುದು ಕಂಡು ಬಂದಿತು. ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಯಾರು ಎಲ್ಲಿಗೆ ಹೋಗುತ್ತಾರೆ ಎಂಬುದರ ಬಗ್ಗೆ ಚಲನ ವಹಿಯಲ್ಲಿ ದಾಖಲಿಸಿಲ್ಲ. ಕೃಷಿ ಇಲಾಖೆಯಲ್ಲಿ ಮಣ್ಣು ಆರೋಗ್ಯ ಅಭಿಯಾನದ ಅನುದಾನ ಬಳಸಿಲ್ಲ. ಅವಧಿ ಮೀರಿದ ಬೀಜಗಳ ವಿತರಣೆ ಮೇಲೆ ನಿಗಾವಹಿಸಿಲ್ಲ. ಸಿಂಧನೂರ ಕೃಷಿ ಕಚೇರಿಯಲ್ಲಿ ಕೆಲ ರಿಜಿಸ್ಟರ್ **(2ನೇ ಪುಟಕ್ಕೆ>>>)**

## ಅರಸು ಆಡಳಿತಕ್ಕೆ ಸಿದ್ದು ಆಡಳಿತಕ್ಕೂ ಹೋಲಿಕೆ ಬೇಡ: ಬಿಎಸ್‌ವೈ

**ಬೆಂಗಳೂರು: ಜ.7–** ದೇವರಾಜ ಅರಸ್ ಆಡಳಿತಕ್ಕೂ ಸಿದ್ದರಾಮಯ್ಯ ಆಡಳಿತಕ್ಕೂ ಹೋಲಿಕೆ ಮಾಡುವುದು ಬೇಡ. ಸಿದ್ದರಾಮಯ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಮಾಜಿ ಸಿಎಂ ಯಡಿಯೂರಪ್ಪ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ಸಿದ್ದರಾಮಯ್ಯ ದೇವರಾಜ ಅರಸು ದಾಖಲೆ ಮುರಿದ ವಿಚಾರಕ್ಕೆ ಬಿಜೆಪಿ ಕಚೇರಿಯಲ್ಲಿ ಇಂದು ಪ್ರತಿಕ್ರಿಯೆ ನೀಡಿದ ಅವರು, ದೇವರಾಜ ಅರಸು ಜೊತೆ ಸಿದ್ದರಾಮಯ್ಯ ಹೋಲಿಕೆ ಸರಿಯಲ್ಲ. ದೇವರಾಜ ಅರಸು ಆಡಳಿತ ವೈಖರಿ ಬೇರೆ, ಸಿದ್ದರಾಮಯ್ಯ ಆಡಳಿತ ವೈಖರಿ ಬೇರೆ. ಈ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ. ಈ ಸಮಯದಲ್ಲಿ ದೊಡ್ಡ ಸಾಧನೆ ಮಾಡಿದ್ದೇನೆ ಎಂದು ತೋರಿಸಿದ್ದನ್ನು ಜನರು ಮೆಚ್ಚೋದಿಲ್ಲ ಅಂತ ಕಿಡಿಕಾರಿದರು. ಈಗಾಗಲೇ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸುತ್ತಿದೆ.

ಮುಂದಿನ ಚುನಾವಣೆಯಲ್ಲೂ ಬಿಜೆಪಿ ನಿಶ್ಚಿತವಾಗಿ ದೊಡ್ಡ ಬಹುಮತದೊಂದಿಗೆ ಸರ್ಕಾರ ರಚನೆ ಮಾಡೋ ದೃಷ್ಟಿಯಿಂದ ಕೆಲಸವನ್ನು ಮಾಡುತ್ತಿದ್ದೇವೆ. ಕಾರ್ಯಕರ್ತರು ಉತ್ಸಾಹದಿಂದ ಮುಂದೆ ಬಂದಿದ್ದಾರೆ. ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆ ಚುನಾವಣೆ ಮತ್ತು ಎಲ್ಲಾ ಚುನಾವಣೆಗಳಲ್ಲಿ ಗೆಲುವು ಸಾಧಿಸುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಮಕ್ಕಳ ಜೀವನದ ಗುರಿಸಾಧನೆಗೆ ಬಾಲ್ಯವಿವಾಹದಿಂದ ಅಡ್ಡಿ: ಡಾ ರಮೇಶ

ಯುವಮಾರ್ಗ ಸುದ್ದಿ

**ರಾಯಚೂರು ಜ,7–:** ಬಾಲ್ಯ ವಿವಾಹವು ಮುಖ್ಯವಾಗಿ ಹೆಣ್ಣುಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಅಲ್ಲದೆ ಪಾಲಕರು ತಮ್ಮ ಮಗಳು ಅಥವಾ ಮಗನಿಗೆ ಬಾಲ್ಯ ವಿವಾಹ ಮಾಡುವುದರಿಂದ ಅವರ ಉನ್ನತ ಸಾಧನೆಗೆ ಪಾಲಕರೆ ಅಡ್ಡಿಪಡಿಸಿದಂತೆ, ಮಕ್ಕಳ ಜೀವನದ ಉನ್ನತ ಗುರಿ ಸಾಧನೆಗಾಗಿ ಹೆಣ್ಣಿಗೆ 18 ವರ್ಷ ಗಂಡಿಗೆ 21 ವರ್ಷ ತುಂಬುವವರೆಗೂ ಮದುವೆ ಮಾಡದಂತೆ ಮುಂದಾಗಬೇಕು ಎಂದು ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ರಮೇಶ್ ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸಂಯೋಗದಲ್ಲಿ ಇತ್ತಿಚೀಗೆ ತಾಲೂಕಿನ ಕಲ್ಮಲ ಗ್ರಾಮದ ಮೆಟ್ರಿಕ್ ಪೂರ್ವ ವಸತಿ ನಿಲಯದಲ್ಲಿ ಪ್ರೌಢ ಶಾಲಾ ಮಕ್ಕಳಿಗೆ ಹಮ್ಮಿಕೊಂಡ ಬಾಲ್ಯವಿವಾಹ ತಡೆ ಹಾಗೂ ಪೋಕ್ಸೊ ಕಾಯ್ದೆಯ ಜಾಗೃತಿ ಕುರಿತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯವಾಗಿ ಹೆಣ್ಣು ಮಕ್ಕಳಿಗೆ ಋತುಚಕ್ರ ಆರಂಭವಾದ ತಕ್ಷಣ ಮದುವೆ ಮಾಡುವ ದುಡುಕಿನ ನಿರ್ಧಾರಗಳಿಂದ ದೈಹಿಕವಾಗಿ ಗರ್ಭಕೋಶವು ಪೂರ್ಣ ಪ್ರಮಾಣದಲ್ಲಿ ಬೆಳವಣಿಗೆಯಾಗದೆ ಗರ್ಭಪಾತ, ಮಗು ಸತ್ತು ಹುಟ್ಟುವುದು, ದಿನತುಂಬದ ಹೆರಿಗೆ, ಬಾಲ್ಯದಲ್ಲಿ ಅಪೌಷ್ಟಿಕತೆ, ಅಕಾಲಿಕ ಗರ್ಭಧಾರಣೆ, ಹೆರಿಗೆಯಲ್ಲಿನ ತೊಡಕುಗಳು, ಮಗುವಿನ ಲಾಲನೆ ಪಾಲನೆಯ ಮಾಹಿತಿ ಕೊರತೆ ಕಾರಣದಿಂದ ಮಗು ಅಪೌಷ್ಟಿಕತೆಗೆ ತುತ್ತಾಗುತ್ತದೆ. ಈ ಹಿನ್ನಲೆ ಬಾಲ್ಯ ವಿವಾಹ ತಡೆ ಎಲ್ಲರೂ ಶ್ರಮಿಸೋಣವೆಂದು ತಿಳಿಸಿದರು.

ಶಾಲಾ ಮುಖ್ಯಗುರು ಚಿತ್ರಾಬಾಯಿ ಮಾತನಾಡಿ ಬಾಲ್ಯದಲ್ಲಿ ಮದುವೆ ಮಾಡುವುದರಿಂದ ಹೆಣ್ಣು ಮಗು ಕೌಟುಂಬಿಕ ಹಿಂಸೆ ಮತ್ತು ಮಾನಸಿಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಅಲ್ಲದೆ ಇದು ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗಿದ್ದು, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಅಡ್ಡಿ. **(2ನೇ ಪುಟಕ್ಕೆ>>>)**

## ಜ.12 ರಂದು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಉಪವಾಸ ಸತ್ಯಾಗ್ರಹ: ಗುರುರಾಜ್ ನಾಗಲಾಪುರ್



ಯುವಮಾರ್ಗ ಸುದ್ದಿ

**ಮಾನ್ವಿ,ಜ.7–**ಪಟ್ಟಣದ ಪತ್ರಿಕಾ ಭವನದಲ್ಲಿ ಸಮಾಜ ಸೇವಕರಾದ ಗುರುರಾಜ್ ನಾಗಲಾಪುರ್ ಮಾತನಾಡಿ ಪಟ್ಟಣದ ಚೀಕಲಪರ್ವಿ ರಸ್ತೆಯಲ್ಲಿ ಬರುವ ಕೋನಾಪುರ ಪೇಟೆ ಅಭಿವೃದ್ಧಿಯಲ್ಲಿ ವಂಚಿತವಾಗಿದ್ದು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು ಕೂಡ ಸಂಬದಿಸಿದ ಅಧಿಕಾರಿಗಳು ಸ್ಪಂದಿಸದೆ ಇರುವುದರಿಂದ ಜ.12 ರಂದು ಕೋನಾಪುರ ಪೇಟೆಯಲ್ಲಿನ ಅಂಬೇಡ್ಕರ್ ನಗರದಲ್ಲಿ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗುವುದು. ಚೀಕಲಪರ್ವಿ ರಸ್ತೆಯಲ್ಲಿ ಪ್ರತಿದಿನ ಬಾರಿ ವಾಹನಗಳ ಸಂಚಾರ ದಿಂದಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು ವಾಹನ ದಟ್ಟಣೆ ನಿವಾರಣೆಗಾಗಿ ಬೈಪಾಸ್ ರಸ್ತೆಯನ್ನು ನಿರ್ಮಾಣ ಮಾಡಬೇಕು. ಪುರಸಭೆ ವತಿಯಿಂದ ನಿರಂತರವಾಗಿ ಶುದ್ದವಾದ ಕುಡಿಯುವ ನೀರಿನ ಪೂರೈಕೆಗಾಗಿ ಕ್ರಮ ಕೈಗೊಳ್ಳಬೇಕು. ರಸ್ತೆಯಲ್ಲಿ ದೂಳು ಬಾರದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು, ಪ್ರವಾಸಿ ಮಂದಿರದ ಹತ್ತಿರ ವಿರುವ ಸರ್ಕಾರಿ ಜಾಗದಲ್ಲಿ ಉದ್ಯಾನವನ ನೀರ್ಮಾಣ ಮಾಡಬೇಕು, ಆರೋಗ್ಯ ಇಲಾಖೆಯಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೌಲಭ್ಯ ಕಲ್ಪಿಸುವುದಕ್ಕಾಗಿ ಖಾಲಿ ಇರುವ ಹುದ್ದೆಗಳನ್ನು ತುಂಬುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು, ಅಗತ್ಯ ತಜ್ಞ ವೈದ್ಯರನ್ನು ಹಾಗೂ ಸಿಬ್ಬಂದಿಗಳನ್ನು ನೇಮಕಮಾಡಬೇಕು, ಪುರಸಭೆ ವತಿಯಿಂದ ಐತಿಹಾಸಿಕ ಸಂಜೀವರಾಯ ದೇವಸ್ಥಾನದ ಹತ್ತಿರ ತ್ಯಾಜ್ಯ ಸುರಿಯುತ್ತಿರುವುದರಿಂದ ಭಕ್ತರಿಗೆ ಅನಾನುಕೂಲವಾಗುತ್ತಿದ್ದು ಸ್ಥಳಾಂತರ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ನರಸಿಂಹ ಹೆಳವರ್,ವೆಂಕಟೇಶ ಯಾದವ್, ಅನಿಲ್ ಗೌಡ, ವೀರೇಶ ಯಾದವ್ ಇದ್ದರು.

## ಪ್ರಜಾಪ್ರಭುತ್ವದಲ್ಲಿ ಮತದಾನ ಪಾತ್ರ ದೊಡ್ಡದು: ಪಿ.ಎಸ್.ವಸ್ತ್ರದ್



ಯುವಮಾರ್ಗ ಸುದ್ದಿ

**ರಾಯಚೂರು ಜ,7–:**ಪ್ರಜಾಪ್ರಭುತ್ವದಲ್ಲಿ ಮತದಾನದ ಪಾತ್ರ ಬಹಳ ದೊಡ್ಡದಾಗಿದೆ. ಚುನಾವಣೆಯ ವೇಳೆಯಲ್ಲಿ ಈ ಪ್ರಕ್ರಿಯೆಯನ್ನು ವಿವಿಧ ಹಂತದ ಅಧಿಕಾರಿಗಳು ಅಚ್ಚುಕಟ್ಟಾಗಿ ಕಾರ್ಯನಿರ್ವಹಣೆ ಮಾಡುವುದರ ಮೂಲಕ ಯಶಸ್ವಿಗೊಳಿಸಬೇಕೆಂದು ರಾಜ್ಯ ಸ್ವೀಪ್ ಸಮಿತಿ ನೊಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಅವರು ಹೇಳಿದರು. ಜನವರಿ 07ರ ಬುಧವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಸ್ವೀಪ್. ಮತ್ತು ಎನ್.ವಿ.ಡಿ ಸ್ಪರ್ಧಾ ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಂದೊಂದು ಮತ ಅಭ್ಯರ್ಥಿಯ ಸೋಲು ಮತ್ತು ಗೆಲುವನ್ನು ನಿರ್ಧಾರ ಮಾಡುವ ಶಕ್ತಿ ಇದೆ. ಈಗ ತಮಗೆಲ್ಲ ಗೊತ್ತಿರುವ ಹಾಗೆ ಮತಯಂತ್ರದ ಮೂಲಕ ಮತದಾನದ ಪ್ರಕ್ರಿಯೆ ನಡೆಯುತ್ತಲಿದೆ. ಎಲ್ಲವೂ ಪಾರದರ್ಶಕವಾಗಿ ಚುನಾವಣೆಯ ಕಾರ್ಯಗಳು ಜರಗುತ್ತವೆ. ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಲ್ಲಿ ಸ್ಪರ್ಧೆಗಳನ್ನು ಮಾಡಲಾಗಿತ್ತು. ಇವು ವಿದ್ಯಾರ್ಥಿಗಳಲ್ಲಿ ಮತದಾನದ ಮಹತ್ವ ಚುನಾವಣೆಯ ಪ್ರಕ್ರಿಯೆಗಳನ್ನು ತಿಳಿಸಲು ಬಹಳ ಸಹಾಯಕವಾಗಿದೆ. ಪ್ರತಿಯೊಂದು ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು. ಹಾಗೂ ಪದವಿ ಮತ್ತು ಸ್ನಾತಕೋತ್ತರ ಶೈಕ್ಷಣಿಕ ಸಂಸ್ಥೆಗಳಲ್ಲಿ ಮತದಾರರ ಸಾಕ್ಷರತಾ ಕ್ಲಬ್‌ನ್ನು ಸ್ಥಾಪಿಸಲಾಗಿದೆ ಎಂದರು. ವಿದ್ಯಾರ್ಥಿಗಳಲ್ಲಿ ಸ್ವೀಪ್ ಕಾರ್ಯಕ್ರಮದ ಅಡಿಯಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆಯ ಅಂಗವಾಗಿ ಸ್ಪರ್ಧೆಗಳನ್ನು ಆಯೋಜನೆ ಮಾಡುವುದರ ಮೂಲಕ ಪ್ರಜಾಪ್ರಭುತ್ವದ ಆಡಳಿತ ವ್ಯವಸ್ಥೆಯಲ್ಲಿ ಮತದಾನದ ಪ್ರಕ್ರಿಯೆಗಳು, ಚುನಾವಣೆಯ ಅಂಶಗಳು ಮತ್ತು ಅದರ ಮಹತ್ವವನ್ನು ತಿಳಿದುಕೊಳ್ಳಲು ಇಂತಹ ಸ್ಪರ್ಧೆಗಳು ಸಾಯಕವಾಗಿವೆ. ಅಲ್ಲದೆ ಮಾದರಿಯ ಮತದಾರರ ಪಟ್ಟಿಯ ಸಿದ್ಧಪಡಿಸಲು ಮತಗಟ್ಟೆಯ ಅಧಿಕಾರಿಗಳು ಮಾಡಬೇಕಾದ ಕಾರ್ಯ ಚಟುವಟಿಕೆಗಳು ಕುರಿತು ಮಾಹಿತಿ ನೀಡಿದರು.

ರಾಯಚೂರು ಜಿಲ್ಲೆಯ ರಾಷ್ಟ್ರೀಯ ಮತದಾರ ದಿನಾಚರಣೆಯ ಕಾರ್ಯಕ್ರಮಗಳು ನಾವು ಕಳಿಸಿದ ಸುತ್ತೋಲೆಯಂತೆ ಸಮಯಕ್ಕೆ ಸರಿಯಾಗಿ ತಾಲೂಕ, ಜಿಲ್ಲಾ ಮತ್ತು. ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಆಯೋಜನೆ ಮಾಡಬೇಕೆಂದರು. ಇದೇ ಸಂದರ್ಭದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ರಾಘವೇಂದ್ರ ಕುಲಕರ್ಣಿ, ಚುನಾವಣೆ ತಹಸಿಲ್ದಾರ್ ಪರಶುರಾಮ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರ ಹೋಕಾಣಿ, ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ವಿವಿಧ ವೈದ್ಯಕೀಯ ಕಾಲೇಜಿನ ಹಾಗೂ ವಿವಿಧ ಇಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕರು, ತಾಲೂಕ ಆರೋಗ್ಯ ಅಧಿಕಾರಿಗಳು, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಮತ್ತು ಜಿಲ್ಲಾ ಡಯಟ್ ಕಾಲೇಜಿನ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಮಾನ್ಯ ಹಾಗೂ ಜ್ಯೋತಿ ಕೊಲೆ ಆರೋಪಿಗಳಿಗೆ ಕಠಿಣ ಶಿಕ್ಷೆಗೆ ಆಗ್ರಹಿಸಿ ದಸಂಸ ಬೃಹತ್ ಪ್ರತಿಭಟನೆ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ರಿ.7–** ಹುಬ್ಬಳ್ಳಿಯ ಮಾನ್ಯಳ ಮರ್ಯಾದೆ ಹತ್ಯೆ ಮಾಡಿರುವ ಆರೋಪಿಗಳಿಗೆ ಉಗ್ರ ಶಿಕ್ಷೆ ಹಾಗೂ ಲಿಂಗಸುಗೂರು ತಾಲೂಕಿನ ಹಟ್ಟಿ ಪಟ್ಟಣದ ಜ್ಯೋತಿ ಕೊಲೆ ಮಾಡಿರುವ ಆರೋಪಿಗಳನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.

ಲಿಂಗಸುಗೂರು ಪಟ್ಟಣದ ಬಸವಸಾಗರ ಕ್ರಾಸ್‌ನಿಂದ ಪ್ರಾರಂಭವಾದ **(2ನೇ ಪುಟಕ್ಕೆ>>>)**



# ಮೊದಲನೇಯ ಪುಟದಿಂದ

## 61 ಕಡೆಗಳಲ್ಲಿ ಅನಿರೀಕ್ಷಿತ ಭೇಟಿ ನೀಡಿದ ಲೋಕಾದಾಳಿ ವರದಿ ಬಿಚ್ಚಿಟ್ಟ ಅಧಿಕಾರಿಗಳು

ನಿರ್ವಹಣೆ ಸರಿಯಾಗಿಲ್ಲ. ಉಪ ನೋಂದಣಿ ಕಚೇರಿಯಲ್ಲಿ ಅವಧಿ ಮೀರಿದರೂ ಕೆಲ ಅರ್ಜಿಗಳ ವಿಲೇ ಮಾಡದಿರುವುದು ಕಂಡು ಬಂದಿತು ಎಂದು ತಿಳಿಸಿದರು.

ಶಿಕ್ಷಣ ಇಲಾಖೆಯಲ್ಲಿ ನಿವೃತ್ತ ಶಿಕ್ಷಕರ ವೇತನ, ಭತ್ಯೆ ಅರ್ಜಿಗಳನ್ನು ಬಾಕಿ ಇರಿಸಲಾಗಿದೆ. ಲಿಂಗಸೂರ ಬಿಇಓ ಕಚೇರಿಯಲ್ಲಿ ನೋಟೀಸಗಳಿಗೆ ಉತ್ತರ ಕೊಡದ ಪರಿಸ್ಥಿತಿಯಿದೆ. ಈ ಬಗ್ಗೆ ವಿವರವಾದ ವರದಿ ನೀಡಿ ಎಂದು ಡಿಡಿಪಿಐ ಅವರಿಗೆ ಸೂಚಿಸಿದರು.

ಲಿಂಗಸೂರು, ದೇವದುರ್ಗ ಭೂದಾಖಲೆ ಇಲಾಖೆಯಲ್ಲಿ ಸರ್ವೆ ಅರ್ಜಿಗಳ ವಿಲೆ ಸರಿಯಾಗಿ ನಡೆಯುತ್ತಿಲ್ಲ ಎನ್ನುವ ದೂರುಗಳಿದ್ದು, ಈ ಬಗ್ಗೆ ಗಮನ ಹರಿಸಬೇಕು ಎಂದು ಡಿಡಿಎಲ್ಆರ್ ಮತ್ತು ಎಡಿಎಲ್ಆರ್‌ಗಳಿಗೆ ಸೂಚನೆ ನೀಡಲಾಯಿತು.

ಗಬ್ಬೂರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಕೀಯ ಯಂತ್ರಗಳನ್ನು ಬಳಸಿಲ್ಲ. ಹೋಮಿಯೋಪತಿ ಡಾಕ್ಟರ್ ಅಲೋಪತಿಕ್ ಚಿಕಿತ್ಸೆ ಕೊಡುತ್ತಿದ್ದಾರೆ. ಆಸ್ಪತ್ರೆಯಲ್ಲಿ ಶುಚಿತ್ವ ಇಲ್ಲ ಈ ಬಗ್ಗೆ ವರದಿ ಕೊಡಬೇಕು. ನಿಯಮಿತ ವಾಗಿ ಎಲ್ಲ ಆಸ್ಪತ್ರೆಗಳಿಗೆ ಭೇಟಿ ನೀಡಿ ವರದಿ ನೀಡಬೇಕು ಎಂದು ಡಿಎಚ್‌ಓ ಅವರಿಗೆ ಸೂಚಿಸಿದರು.

ದೇವದುರ್ಗ 3ನೇ ಮತ್ತು 4ನೇ ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿಯರಿಗೆ ಡಿಸೆಂಬರ್ ಮಾಹೆಯಲ್ಲಿ ಪೌಷ್ಠಿಕ ಆಹಾರ ನೀಡಿಲ್ಲ. ರಾಯಚೂರ ಅಂಗನವಾಡಿ ಕೇಂದ್ರವೊಂದರಲ್ಲಿ ದಾಸ್ತಾನು ವಹಿ ನಿರ್ವಹಿಸಿಲ್ಲ. ಯಾವ ಕಡೆಗಳಲ್ಲಿ ಅವ್ಯವಸ್ಥೆ ಇದೆ ಎಂಬುದನ್ನು ಪರಿಶೀಲಿಸಿ ವರದಿ ನೀಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಲಿಂಗಸೂರ ಸಮಾಜ ಕಲ್ಯಾಣ ಇಲಾಖೆಯ ವಸತಿಯೊಂದರಲ್ಲಿ ವಿದ್ಯುತ್ ದೀಪ ಇಲ್ಲ. ಬಿಸಿಎಂ ಇಲಾಖೆಯ ಕೆಲ ವಸತಿ ನಿಲಯಗಳಲ್ಲಿ ಲೋಪಗಳು ಇವೆ. ಈ ರೀತಿಯ ಅವ್ಯವಸ್ಥೆಗಳನ್ನು ಸರಿಪಡಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಮತ್ತು ಬಿಸಿಎಂ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ರಾಯಚೂರು ಜಿಲ್ಲಾ ಕರ್ನಾಟಕ ಲೋಕಾಯುಕ್ತದ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಲೋಕಾಯುಕ್ತದ ಡಿವೈಎಸ್ಪಿ ರವಿ ಪುರುಷೋತ್ತಮ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸ್ವಾಗತಿಸಿದರು.

## ಮಾನ್ಯ ಹಾಗೂ ಜ್ಯೋತಿ ಕೊಲೆ ಆರೋಪಿಗಳಿಗೆ ಕಠಿಣ ಶಿಕ್ಷೆಗೆ ಆಗ್ರಹಿಸಿ ದಸಂಸ ಬೃಹತ್ ಪ್ರತಿಭಟನೆ

ಪ್ರತಿಭಟನಾ ರ್‍ಯಾಲಿ ಪಟ್ಟಣದ ವಿವಿಧ ಬೀದಿಗಳಲ್ಲಿ ಸಂಚರಿಸಿ ಅಂಬೇಡ್ಕರ್ ವೃತ್ತದಲ್ಲಿ ಸಹಾಯಕ ಆಯುಕ್ತರ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಸಂಚಾಲಕ ಹನುಮಂತಪ್ಪ ವೆಂಕಟಾಪೂರು ಮಾತನಾಡಿ ಜಾತಿಯ ಹೆಸರಿನಲ್ಲಿ ಸ್ವಂತ ಮಗಳನ್ನೇ ಕೊಲೆ ಮಾಡಿರುವ ಕಟುಕ ಮನಸ್ಸಿನ ಜಾತಿಗೇಡಿಗಳಿಗೆ ಸರ್ಕಾರ ಉಗ್ರ ಶಿಕ್ಷೆಯನ್ನು ನೀಡಬೇಕು ಹಾಗೂ ನೊಂದ ಕುಟುಂಬಕ್ಕೆ ಸೂಕ್ತ ರಕ್ಷಣೆಯ ಜೊತೆಗೆ ಆ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗವನ್ನು ನೀಡಬೇಕು.

ಹಟ್ಟಿ ಪಟ್ಟಣದ ಜ್ಯೋತಿಯ ಕೊಲೆಯನ್ನು ಪೊಲೀಸರು ಯಾವುದೇ ತನಿಖೆ ನಡೆಸದೇ ಅನುಮಾನಸ್ಪದ ಸಾವು ಎಂದು ಕೇಸ್ ದಾಖಲಿಸಿಕೊಂಡು ಕೊಲೆ ಆರೋಪಿಗಳನ್ನು ರಕ್ಷಣೆ ಮಾಡುವ ಉದ್ದೇಶದಿಂದ ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನವನ್ನು ಹಟ್ಟಿ ಪೊಲೀಸರು ಮಾಡುತ್ತಿದ್ದಾರೆ.

ಕಾರಣ ಸರ್ಕಾರ ಜ್ಯೋತಿ ಕೊಲೆಯನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಿ ಕೊಲೆ ಮಾಡಿರುವ ಕುಟುಂಬದ ಎಲ್ಲಾ ಸದಸ್ಯರನ್ನು ಬಂಧಿಸಬೇಕು ಹಾಗೂ ಪ್ರಕರಣವನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿರುವ ಹಟ್ಟಿ ಠಾಣೆಯ ಆರಕ್ಷಕ ನಿರೀಕ್ಷಕರನ್ನು ಕೂಡಲೇ ಅಮಾನತ್ತು ಮಾಡಬೇಕೆಂದು ಆಗ್ರಹಿಸುತ್ತೇವೆ.

ಈ ಸಂದರ್ಭದಲ್ಲಿ ಶರಣಪ್ಪ ಕಟ್ಟಿಮನಿ, ಬಸವರಾಜ ಬಂಕದಮನಿ, ಆಜಪ್ಪ ಕರಡಕಲ್, ಹುಸೇನಪ್ಪ ಯರಡೋಣಾ, ನಾಗರಾಜ ಯರಡೋಣಾ, ಬಸವರಾಜ ಕುಣೆಕೆಲ್ಲೂರು, ನಾಗರಾಜ ಹಾಲಭಾವಿ, ಮೌನೇಶ ಐದನಾಳ, ರಾಘವೇಂದ್ರ ತುಪ್ಪದ್, ಯಮನೂರಪ್ಪ ಉಪ್ಪಾರನಂದಿಹಾಳ, ಲಕ್ಕಪ್ಪ ನಾಗರಾಳ, ಯಂಕಪ್ಪ ಚಿತ್ತಾಪೂರ ಮಹಿಳಾ ಒಕ್ಕೂಟದ ಸಂತೋಷಮ್ಮ ಸೇರಿ ಇತರರು ಇದ್ದರು.

## ಮಕ್ಕಳ ಜೀವನದ ಗುರಿಸಾಧನೆಗೆ ಬಾಲ್ಯವಿವಾಹದಿಂದ ಅಡ್ಡಿ: ಡಾ ರಮೇಶ

ಅಲ್ಲದೆ ಹೆಣ್ಣು ಮಗುವಿಗೆ 18 ವರ್ಷ ತುಂಬುವುದರೊಳಗೆ ಮದುವೆ ಮಾಡಿದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ ಗಂಡಿನ ಮನೆಯವರಿಗೆ, ಮದುವೆ ಮಾಡಿಸಿದವರಿಗೆ, ಭಾಗಿಯಾದವರಿಗೆ 1 ಲಕ್ಷ ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ವಿಧಿಸಲಾಗುವುದು ಎಂಬುದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕಿದೆ ಎಂದರು.

ಈ ವೇಳೆ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಅವರು ಮಾತನಾಡಿ, ಪ್ರತಿ ಮನುಷ್ಯನ ಜೀವನದಲ್ಲಿ ಸಾಮಾನ್ಯವಾಗಿ 10-19 ವರ್ಷಗಳ ವಯೋಮಾನ ಅತ್ಯಂತ ಸೂಕ್ಷ್ಮ ಕಾಲ ಘಟ್ಟವಾಗಿದೆ. ಈ ಹಂತದಲ್ಲಿ ಹಾರ್ಮೋನುಗಳ ಬದಲಾವಣೆಯೊಂದಿಗೆ ಉಂಟಾಗುವ ಧ್ವನಿ ಬದಲಾವಣೆ, ಬಾಲಕರಲ್ಲಿ ಮಿಸೆ ಗಡ್ಡಗಳ ಕಾಣಿಸುವಿಕೆ, ಬಾಲಕಿಯರಲ್ಲಿ ಋತುಚಕ್ರ ಆರಂಭವಾಗುವ ಜೊತೆಗೆ ದೈಹಿಕ ಬದಲಾವಣೆ, ಕಂಕುಳದಲ್ಲಿ ಕೂದಲುಗಳ ಕಾಣಿಸುವಿಕೆ ಸೇರಿದಂತೆ ಮುಖದಲ್ಲಿ ಮೊಡುವೆಗಳು ಕಂಡು ಬರಲಾರಂಬಿಸುತ್ತವೆ. ಇವೆಲ್ಲವುಗಳು ಹದಿಹರೆಯದ ಸಂಕೇತವಾದರೆ, ದೈಹಿಕ ಆಕರ್ಷಣೆಗೆ ಒಳಗಾಗುವ ಸೂಕ್ಷ್ಮ ಅಂಶದ ಕುರಿತು ಅದರ ಸಾಧಕ-ಭಾದಕಗಳ ಬಗ್ಗೆ ಹೆಚ್ಚು ಜಾಗೃತಿ ವಹಿಸಬೇಕಿದೆ. ಅಲ್ಲದೆ ಮಕ್ಕಳ ಏಳ್ಗೆಗಾಗಿ ಹಗಲಿರಳು ತಂದೆ-ತಾಯಿ ಶ್ರಮಿಸುವುದನ್ನು ನಾವು ಕಾಣುತ್ತೇವೆ. ಮಕ್ಕಳು ಉನ್ನತ ಹುದ್ದೆ, ಸ್ಥಾನಮಾನ ಪಡೆಯಲಿ ಎಂಬ ಮಹಾದಾಸೆ ಇರುತ್ತದೆ. ಈ ದಿಶೆಯಲ್ಲಿ ಸರಿಯಾದ ಪೌಷ್ಟಿಕಾಹಾರ ಸೇವನೆ, ವ್ಯಾಯಾಮ, ಯೋಗಗಳೊಂದಿಗೆ ಶ್ರದ್ಧೆಯಿಂದ ಓದಿನ ಕಡೆ ಗಮನ ನೀಡುವ ಮೂಲಕ ಪ್ರತಿ ಆರು ತಿಂಗಳಿಗೊಮ್ಮೆ ಜಂತುಹುಳು ಮಾತ್ರೆ, ಪ್ರತಿವಾರಕ್ಕೊಮ್ಮೆ ಕಬ್ಬಿಣಾಂಶ ಮಾತ್ರೆ ಸೇವಿಸಿ ದೇಹದಲ್ಲಿ ಕಬ್ಬಿಣಾಂಶದ ಕೊರತೆಯಾಗದಂತೆ ಮುತವರ್ಜಿ ವಹಿಸಬೇಕೆಂದರು.

ಸ್ನೇಹಾ ಕ್ಲಿನಿಕ್ ಸದ್ಬಳಕೆ ಮಾಡಿಕೊಳ್ಳಿ: ರಾಷ್ಟ್ರೀಯ ಕಿಶೋರಿ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಸ್ನೇಹಾ ಕ್ಲಿನಿಕ್‌ಗಳ ಮೂಲಕ ಹದಿಹರೆಯದ ಆರೋಗ್ಯ ಸಮಸ್ಯೆಗಳಿಗೆ ಆಪ್ತ ಸಮಾಲೋಚನೆಗಾಗಿ ಆರೋಗ್ಯ ಕೇಂದ್ರಗಳಲ್ಲಿ ಅವಕಾಶ ಕಲ್ಪಿಸಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ತಿಳಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ನಿಲಯ ಪಾಲಕರಾದ ರಂಗನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ, ಹಿರಿಯ ಆರೋಗ್ಯ ನಿರಿಕ್ಷಣಾಧಿಕಾರಿ ಭಾನುಕಾಂತ ರೆಡ್ಡಿ, ಹಿರಿಯ ಪಿಹೆಚ್‌ಸಿಓ ರೇಣುಕಾ, ಶಿಕ್ಷಕರಾದ ರಮೇಶ, ಪಿಹೆಚ್‌ಸಿಓ ರಸೂಲ್‌ಬಿ, ಹೆಚ್‌ಐಓ ಮಹಾಲಕ್ಷ್ಮಿ, ಆಶಾ ಕಾರ್ಯಕರ್ತೆ ಶಂಕ್ರಮ್ಮ, ನಾಗಮ್ಮ ಸೇರಿದಂತೆ ಶಾಲಾ ಮಕ್ಕಳು ಇದ್ದರು.

## ಕೆಪಿಎಸ್ ಮ್ಯಾಗ್ನೆಟ್ ಜಾರಿ: ಎಐಡಿಎಸ್‌ಓ ಖಂಡನೆ



**ಕಲಬುರಗಿ,ಜ.7–** ಗ್ರಾಮೀಣ ಭಾಗದ 40 ಸಾವಿರಕ್ಕೂ ಅಧಿಕ ಶಾಲೆಗಳನ್ನು ಮುಚ್ಚಿ ಪಂಚಾಯಿತಿಗೊಂದರಂತೆ ಕೇವಲ 6 ಸಾವಿರ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಸರ್ಕಾರವು ಮುಂದಾಗಿರುವದನ್ನು ಎಐಡಿಎಸ್‌ಓ ಖಂಡಿಸಿದೆ. ಎಐಡಿಎಸ್ ಓ ನೇತೃತ್ವದಲ್ಲಿ ರಾಜ್ಯದಲ್ಲೆಡೆ ಜನ ಹೋರಾಟ ನಡೆಯುತ್ತಿದೆ.

ಸಾವಿರಾರು ಸಂಖ್ಯೆಯಲ್ಲಿ ಪಾಲಕರು ಹಾಗೂ ಗ್ರಾಮಸ್ಥರು ಬೀದಿಗಿಳಿದು ಊರಿನ ಶಾಲೆಗಳನ್ನು ಮುಚ್ಚುವುದನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ. ಈ ತೀವ್ರ ಜನವಿರೋಧದ ನಡುವೆಯೂ ಸರ್ಕಾರವು ಈ ಕೃತ್ಯವನ್ನು ಮುಂದುವರೆಸಿದೆ.

ಜನಾಭಿಪ್ರಾಯವನ್ನು ಧಿಕ್ಕರಿಸಿರುವ ಸರ್ಕಾರದ ಈ ನಿರಂಕುಶ ಮತ್ತು ಅಪ್ರಜಾತಾಂತ್ರಿಕ ನಡೆ ಖಂಡನೀಯ. ಕೂಡಲೇ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯನ್ನು ಹಿಂಪಡೆಯ ಬೇಕು ಮತ್ತು ಶಿಕ್ಷಕರು ಹಾಗೂ ಸೌಲಭ್ಯಗಳ ಕೊರತೆಯಿಂದ ನರಳುತ್ತಿರುವ ರಾಜ್ಯದ ಸರ್ಕಾರಿ ಶಾಲೆಗಳಿಗೆ ಸಮರ್ಪಕ ಸೌಲಭ್ಯ ನೀಡಿ ಅಭಿವೃದ್ಧಿಪಡಿಸ'ಬೇಕೆಂದು ಎಐಡಿಎಸ್‌ಓಜಿಲ್ಲಾ ಕಾರ್ಯದರ್ಶಿ ವೆಂಕಟೇಶ್ ದೇವದುರ್ಗ ಆಗ್ರಹಿಸಿದ್ದಾರೆ.

## ದೇವದುರ್ಗ: ಮಡಿವಾಳ ಸಮಾಜದ ಅಧ್ಯಕ್ಷರಾಗಿ ಶರಣಪ್ಪ ಮಡಿವಾಳ ನೇಮಕ



ಯುವಮಾರ್ಗ ಸುದ್ದಿ

**ದೇವದುರ್ಗ,ಜ.7–** ಮಡಿವಾಳ ಸಮಾಜದ ದೇವದುರ್ಗ ತಾಲೂಕು ಘಟಕದ ಅಧ್ಯಕ್ಷರಾಗಿ ಶರಣಪ್ಪ ನಿಲೋಗಲ್, ಉಪಾಧ್ಯಕ್ಷರಾಗಿ ಮಹಾದೇವ ದೇವದುರ್ಗ, ಅಮರೇಶ ಹೇಮನೂರು, ಹಾಜಪ್ಪ ಗೋಪಾಳಪುರ, ಕಾರ್ಯದರ್ಶಿಯಾಗಿ ಹನುಮಂತ ಜಾಲಹಳ್ಳಿ ನೇಮಕಗೊಂಡರು.

ಸೋಮವಾರ ದೇವದುರ್ಗ ಪಟ್ಟಣದ ಅಂಬ ಭವಾನಿ ದೇವಸ್ಥಾನದಲ್ಲಿ ನಡೆದ ಸಭೆಯಲ್ಲಿ ಮಡಿವಾಳ ಸಮಾಜಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಈ ಸಂಘದ ಖಜಾಂಚಿಯಾಗಿ ಲಿಂಗರಾಜ ದೇವದುರ್ಗ, ಸಹ ಕಾರ್ಯದರ್ಶಿಯಾಗಿ ಅಯ್ಯಪ್ಪ ಗೂಗಲ್, ಸಂಘಟನಾ ಕಾರ್ಯದರ್ಶಿಯಾಗಿ ರಾಮಣ್ಣ ಮಲದಕಲ್, ಗೌರವಾಧ್ಯಕ್ಷರಾಗಿ ಚಂದ್ರಶೇಖರ ಚಂದನಕೇರಾ, ರಾಘರಾಮ ದೇವದುರ್ಗ, ರಂಗಪ್ಪ ಮುಸ್ಟೂರು, ಚನ್ನಪ್ಪ ಹೇಮನೂರು, ಗೌರವ ಸಲಹೆಗಾರರಾಗಿ ಬಸವರಾಜ ದೇವದುರ್ಗ, ಬಸವರಾಜ ಕೊಪ್ಪರ, ಗುರುರಾಜ ಗಬ್ಬೂರು, ಬಸವರಾಜ ತುಮಕೂರು ಶಿಕ್ಷಕರು ಇವರನ್ನು ನೇಮಕ ಮಾಡಲಾಯಿತು.

ಸನ್ಮಾನ: ಇದೇ ವೇಳೆ ನೂತನ ಪದಾಧಿಕಾರಿಗಳಾಗಿ ನೇಮಕಗೊಂಡವರನ್ನು ಸಮಾಜದ ಮುಖಂಡರು ಸನ್ಮಾನಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಮಾಜದ ಸದಸ್ಯರಾದ ಚಂದ್ರು ದೇವದುರ್ಗ, ಬಸವ ಅಂಜಳ, ಸುನೀಲ್, ಮೌನೇಶ, ಬಸವ ಮಲದಕಲ್, ನಿಂಗಪ್ಪ, ಗೂಳಪ್ಪ, ಸಿದ್ದಪ್ಪ, ಆಂಜನೇಯ, ಶಿವಪ್ಪ, ನಾಗಪ್ಪ, ಮೌನೇಶ, ಹನ್ಮಂತ್ರಾಯ ಹೇಮನೂರು, ದೇವಪ್ಪ, ಶರೀಫ್, ರಾಮು, ನಿಂಗಪ್ಪ, ಉದಯ ಗಬ್ಬೂರು, ಜಯಲಕ್ಷ್ಮಿ ದೇವದುರ್ಗ ಸೇರಿದಂತೆ ಮಡಿವಾಳ ಸಮಾಜದ ಮುಖಂಡರು, ಯುವಕರು ಇದ್ದರು.

## ಮಕ್ಕಳಿಗೆ ಸಿಗದ ಪೌಷ್ಟಿಕ ಆಹಾರ..? ಇಪ್ಪತ್ನಾಲ್ಕು ಅಪೌಷ್ಟಿಕತೆ ಮಕ್ಕಳು.!!




ಯುವಮಾರ್ಗ ಸುದ್ದಿ

**ಲಿಂಗಸಗೂರು,ಜ.7–** ಅಪೌಷ್ಠಿಕತೆಯಿಂದ ಮಕ್ಕಳು ಬಳಲುತ್ತಿರುವ ಮಕ್ಕಳಿಗಾಗಿ ಸರ್ಕಾರ ಕೋಟಿ ಕೋಟಿ ಅನುದಾನ ಬಿಡುಗಡೆ ಮಾಡುತ್ತದೆ. ಆದರೆ ಅನುಷ್ಠಾನ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ನಿರ್ಲಕ್ಷ ದಿಂದಾಗಿ ಅಪೌಷ್ಠಿಕ ಮಕ್ಕಳಿಗೆ ಆಹಾರ ಸಿಗದಿರುವುದು ಒಂದು ಕಡೆಯಾದರೆ. ಅಪೌಷ್ಠಿಕ ಮಕ್ಕಳ ಪೌಷ್ಠಿಕ ಆಹಾರವನ್ನು ಕೊಡದೇ ಅದನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿ ಮಕ್ಕಳ ಅನ್ನಕ್ಕೂ ಕನ್ನಾ ಹಾಕಿತ್ತಿರುವ ಘಟನೆ ಬೆಳಕಿಗೆ ಬಂದಿದೆ.

ಲಿಂಗಸುಗೂರು ತಾಲೂಕಿನಶಿಶು ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಅಂಕಿ ಸಂಖ್ಯೆಗಳ ಪ್ರಕಾರ 24 ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆಂಬ ಮಾಹಿತಿ ಇಲಾಖೆಯಿಂದ ಲಭ್ಯವಾಗಿದೆ. ತಾಲೂಕಿನ ಈಚನಾಳ ವೃತ್ತದಲ್ಲಿ 4 ಮಕ್ಕಳು, ಹಟ್ಟಿ ವೃತ್ತದಲ್ಲಿ 6 ಮಕ್ಕಳು, ನಾಗರಹಾಳ ವೃತ್ತದಲ್ಲಿ 2, ಮಸ್ಕಿ ವೃತ್ತದಲ್ಲಿ 4, ಮೆದಿಕಿನಾಳ ವೃತ್ತದಲ್ಲಿ 3, ಆನ್ವರಿ ವೃತ್ತದಲ್ಲಿ 2, ಗುರುಗುಂಟಾ ವೃತ್ತದಲ್ಲಿ 1, ಮುದಗಲ್ ವೃತ್ತದಲ್ಲಿ 1 ಹಾಗೂ ವಾಕಾಪುರು ವೃತ್ತದಲ್ಲಿ 1 ಸೇರಿ ಒಟ್ಟು 24 ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ.

**ಮಗುವಿಗೆ ನೀಡುವ ಪೌಷ್ಠಿಕ ಆಹಾರ:** ಅಪೌಷ್ಠಿಕ ಮಕ್ಕಳಿಗೆ ಸರ್ಕಾರ ಪ್ರತಿತಿಂಗಳು ಪುಷ್ಠಿ, ಬೆಲ್ಲ, ಹಾಲಿನ ಪೌಡರ್, ಮೊಟ್ಟೆಗಳನ್ನು ನೀಡಬೇಕೆಂದು ಸರ್ಕಾರ ನಿಯಮ ರೂಪಿಸಿದೆ. ಆದರೆ ಸಿಬ್ಬಂದಿಗಳು ತಮಗೆ ಮನಸ್ಸಿಗೆ ಬಂದ ಹಾಗೆ ಕೊಡುತ್ತಾರೆ.

ಆರು ವರ್ಷದೊಳಗಿನ ಮಕ್ಕಳಿಗೆ ಕಾಡುವ ಅಪೌಷ್ಠಿಕತೆ ನಿವಾರಣೆ ಮತ್ತು ವಿವಿಧ ಅನಾರೋಗ್ಯ ಸಮಸ್ಯೆಗಳನ್ನು ನಿವಾರಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆ ಪ್ರತಿ ವರ್ಷ ನೂರಾರು ಕೋಟಿ ರೂಪಾಯಿ ಖರ್ಚು ಮಾಡುತ್ತಿವೆ.

ಅನ್ನಕ್ಕೂ ಕನ್ನಾ: ಅಪೌಷ್ಠಿಕ ಮಕ್ಕಳಿಗೆ ಕೊಡಬೇಕಾದ ಪೌಷ್ಠಿಕ ಆಹಾರವನ್ನು ಪ್ರತಿ ತಿಂಗಳು ವಿತರಣೆ ಮಾಡುವುದಿಲ್ಲ. ತಾಲೂಕಿನ ಈಚನಾಳ-2 ಅಂಗನವಾಡಿ ಕೇಂದ್ರ ವ್ಯಾಪ್ತಿಗೆ ಬರುವ ಒಂದು ಮಗುವಿಗೆ 1 ವರ್ಷದಲ್ಲಿ ಕೇವಲ 3 ಬಾರಿ ಮಾತ್ರ ಮೊಟ್ಟೆ ನೀಡಲಾಗಿದೆ. ಇದೇ ರೀತಿ ತಾಲೂಕಿನಲ್ಲಿ ಅಪೌಷ್ಠಿಕ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ವಿತರಣೆ ಮಾಡುತ್ತಿಲ್ಲ. ಅಲ್ಲದೇ ಅಪೌಷ್ಠಿಕತೆಯಿಂದ ಗುಣಮುಖ ಹೊಂದಿದ ಮಕ್ಕಳನ್ನು ಸಹ ಅಪೌಷ್ಠಿಕ ಮಕ್ಕಳ ಪಟ್ಟಿಯಲ್ಲಿ ಸೇರಿಸಿ ಆಹಾರವನ್ನು ಕದಿಯುತ್ತಿರುವ ಅಧಿಕಾರಿಗಳು ಸಿಬ್ಬಂದಿಗಳು ಮಕ್ಕಳ ಅನ್ನಕ್ಕೆ ಕನ್ನಾ ಹಾಕುತ್ತಿದ್ದಾರೆಂಬ ಆರೋಪಗಳು ಕೇಳಿ ಬರುತ್ತಿವೆ.

ಅಧಿಕಾರಿಗಳ ನಿರ್ಲಕ್ಷ :

ಮಕ್ಕಳ ಆಹಾರವನ್ನು ಕದ್ದು ತಿನ್ನುವ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕಾದ ಅಧಿಕಾರಿಗಳು ಕಛೇರಿಯಲ್ಲಿಯೇ ಕುಳಿತು ಕಾಲಹರಣ ಮಾಡುತ್ತಿದ್ದಾರೆ. ಇಲ್ಲಿಯವರೆಗೂ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ವಸ್ತುಸ್ಥಿತಿಯನ್ನು ಪರಿಶೀಲಿಸಬೇಕಾದ ಅಧಿಕಾರಿಗಳೇ ಕಣ್ಮುಚ್ಚಿಕೊಂಡು ಕುಳಿತ್ತಿರುವುದು ಅವರ ನಿರ್ಲಕ್ಷಕ್ಕೆ ಹಿಡಿದ ಕೈಗನ್ನಡಿಯಾಗಿದೆ.

**ಅಪೌಷ್ಠಿಕ ಮಕ್ಕಳಿಗೆ ಸರಿಯಾದ ಆಹಾರ ವಿತರಣೆ ಮಾಡಲಾಗುತ್ತಿದೆ. ನಾನು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಈ ಬಗ್ಗೆ ಯಾವುದೇ ದೂರುಗಳು ಬಂದಿಲ್ಲ. ನಿಮಗೇನಾದರು ಅಂತಹ ವಿಷಯಗಳು ಕಂಡು ಬಂದರೆ ನನ್ನ ಗಮನಕ್ಕೆ ತನ್ನಿ ನಾನು ಕ್ರಮ ಕೈಗೊಳ್ಳುತ್ತೇನೆ– ನಾಗರತ್ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಲಿಂಗಸುಗೂರು.**

## ಅಭಿಮಾನಿಗಳಿಂದ ಪಟಾಕಿ ಸಿಡಿಸಿ ಖುಷಿ ಸಂಭ್ರಮ

**ಜಮಖಂಡಿ: ಜ.7–** ನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯ ರಾಜಕೀಯದ ಇತಿಹಾಸದಲ್ಲಿ ಹೆಚ್ಚು ದೀರ್ಘಾವಧಿ ಕಾಲ ಆಡಳಿತ ನಡೆಸುವ ಮೂಲಕ ದಾಖಲೆ ನಿರ್ಮಿಸಿದ ಈ ಐತಿಹಾಸಿಕ ದಿನದಂದು ಸಿದ್ಧರಾಮಯ್ಯನವರ ಅಭಿಮಾನಿ ಬಳಗ ವತಿಯಿಂದ ನಗರದ ಶ್ರೀ ಭಕ್ತ ಕನಕದಾಸ ವೃತ್ತದಲ್ಲಿ ಸಿದ್ದರಾಮಯ್ಯನವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ತೆಂಗಿನಕಾಯಿ ಒಡೆದು ಪಟ್ಟಾಕಿಯನ್ನು ಸಿಡಿಸುವುದರ ಮೂಲಕ ಸಂಭ್ರಮಾಚರಣೆ ಮಾಡಿದರು.



ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ನಾಗವಾರ ಬನ) ರಾಜ್ಯ ಸಂಚಾಲಕ ಶಾಮರಾವ ಘಾಟಗೆ ಮಾತನಾಡಿ ದೀನದಲಿತರ ಏಳಿಗೆಗಾಗಿ ಹರಿಜನ ಗಿರಿಜನರ ಕಲ್ಯಾಣಕ್ಕಾಗಿ ಬಡವರ ಅಭಿವೃದ್ಧಿಗಾಗಿ ಹಲವಾರು ಗ್ಯಾರಂಟಿ ಯೋಜನೆಗಳನ್ನು ಕೊಟ್ಟು ನಾಡಿಗೆ ಒಂದು ಕಣ್ಮನಿಯಾದ ಸಿದ್ದ ರಾಮಯ್ಯ ಮಾಜಿ ಮುಖ್ಯ ಮಂತ್ರಿ ದಿವಂಗತ ದೇವರಾಜ ಅರಸು ಅವರ ದಾಖಲೆ ಮುರಿದು ಕರ್ನಾಟಕದ ದೀರ್ಘಾವಧಿ ಮುಖ್ಯ ಮಂತ್ರಿಯಾಗಿ ಇತಿಹಾಸ ನಿರ್ಮಿಸಿದ್ದರೆ ಎಂದರು

ಜಮಖಂಡಿ ತಾಲೂಕ ಕುರುಬ ಸಂಘದ ಅಧ್ಯಕ್ಷರು ಮಾತನಾಡಿ ಈ ದಾಖಲೆ ನಿರ್ಮಾಣವಾಗಲು ಕಾರಣಿ ಕರ್ತರಾಗಿರತಕ್ಕಂತ ರಾಜ್ಯದ ಎಲ್ಲಾ ಜನತೆಗೆ ಕಾರ್ಯಕರ್ತರಿಗೆ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಧನ್ಯವಾದ ತಿಳಿಸಿದರು.

ಯುವ ಅಭಿಮಾನಿ ಚಿದಾನಂದ ಬಬಲಾದಿ ಮಾತನಾಡಿ ಸಿದ್ದರಾಮಯ್ಯ ನವರ ಜೀವನ ಚರಿತ್ರೆ ರಾಜಕೀಯದಲ್ಲಿ ನಡೆದು ಬಂದ ಹಾದಿ ಹಾಗೂ ಸಿದ್ದರಾಮಯ್ಯನವರ ವಿರುದ್ಧ ನಡೆದಂತ ಷಡ್ಯಂತ್ರಗಳನ್ನು ವಿರೋಧಿಸಿ ಮಾತನಾಡಿ, ಪೂರ್ವ ದಿಕ್ಕಿನಲ್ಲಿ ಸೂರ್ಯ ಹುಟ್ಟುವುದು ಎಷ್ಟು ಸತ್ಯವೋ, ಸಿದ್ದರಾಮಯ್ಯನವರು ಪೂರ್ಣ ಐದು ವರ್ಷಗಳ ಕಾಲ ಮುಖ್ಯಮಂತ್ರಿ ಆಗಿ ಮುಂದುವರೆಯುವುದು ಅಷ್ಟೇ ಸತ್ಯ ಎಂದು ತಮ್ಮ ಅಭಿಮಾನವನ್ನು ಹಂಚಿಕೊಂಡರು.

ಪಟಾಕಿ ಹೆಚ್ಚಿ ಸಂಭ್ರಮಿಸಿದ ನಂತರ, 20ಕ್ಕೂ ಅಧಿಕ ಯುವ ಅಭಿಮಾನಿಗಳು ಸಮಾಜಕ್ಕೆ ಕಾರ್ಯವಾದ ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ರಕ್ತದಾನವನ್ನು ಮಾಡಿದರು. ಉಪಾದ್ಯಕ್ಷ ಕರೆಪ್ಪ ಬೀಳಗಿ,ಹನಮಂತ ಯಮಗಾರ,ದಲಿತ ಮುಖಂಡ ಮುತ್ತನ್ನ ಮೇತ್ರಿ,ಸೊಮರಾಯ ಚಿಕ್ಕೋಡ್ರ,

ಸಂತೋಷ ಮಮದಾಪೂರ, ಆಕಾಶ ಬಿಳಗಿ,ಮುದಕಪ್ಪ ಎಣ್ಣಿ, ನಿಂಗಪ್ಪ ಮಟಗಾರ,ಶಿವು ಸಿಂಗಣ್ಣವರ,ಸೇರಿದಂತೆ ಅನೇಕರು ಇದ್ದರು

# ಶಿವಯೋಗಿ ಸಿದ್ಧರಾಮ ಜಯಂತಿ ಆಚರಣೆಗೆ ಸಿದ್ಧತೆಯಾಗಲಿ

**ರಾಯಚೂರು ಜ,7–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಶಿವಯೋಗಿ ಸಿದ್ಧರಾಮ ಜಯಂತಿಯನ್ನು ಜನವರಿ 14ರಂದು ವಿಜೃಂಭಣೆಯಿಂದ ಆಚರಿಸಲು ಅಗತ್ಯ ಸಿದ್ಧತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜನವರಿ 07ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶಿವಯೋಗಿ ಸಿದ್ಧರಾಮ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನವರಿ 14ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ನಡೆಯುವ ಶಿವಯೋಗಿ ಸಿದ್ಧರಾಮ ಜಯಂತಿಯ ವೇದಿಕೆಯ ಕಾರ್ಯಕ್ರಮಕ್ಕೆ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು. ಅಂದು ಎಲ್ಲಾ ಇಲಾಖೆಗಳ ರಾಯಚೂರು ಜಿಲ್ಲಾ ಹಾಗೂ ರಾಯಚೂರು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯ ಹಾಜರಿರಬೇಕು ಎಂದು ತಿಳಿಸಿದರು.

ಅಂದು ಬೆಳಗ್ಗೆ 9 ಗಂಟೆಗೆ ನಗರದ ಆಶಾಪೂರು ವೃತ್ತದಿಂದ ನಡೆಯುವ ಮೆರವಣಿಗೆಯ ಮಾರ್ಗದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ದೀಪಾಲಂಕಾರ ಮಾಡಬೇಕು. ಎಲ್ಲ ಸರಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು ಎಂದು ಸೂಚನೆ ನೀಡಿದರು.

ವೇದಿಕೆಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕ್ಕೆ ಏರ್ಪಾಡು ಮಾಡಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕು. ಅಲ್ಲದೆ ಶಿಷ್ಟಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು ಎಂದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಶಿವರಾಜ, ಹೊನ್ನಪ್ಪ, ಆಂಜಿನಯ್ಯ, ಶಶಿಕಲಾ ಭೀಮರಾಯ, ಯಲ್ಲಪ್ಪ, ದೇವೇಂದ್ರ ಬಿಚ್ಚಾಲಿ, ಲಕ್ಷಣ ಗಾಣಧಾಳ, ಶಿವರಾಜ, ಕೆ.ತಿಮ್ಮಪ್ಪ, ಜಂಬಣ್ಣ, ಈರೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ರಾಯಚೂರು ಉತ್ಸವ: ಜ.17, 18 ರಂದು ವಾಲಿಬಾಲ್, ಕಬಡ್ಡಿ ಸ್ಪರ್ಧೆ

**ರಾಯಚೂರು ಜ,7–** ರಾಯಚೂರು ಜಿಲ್ಲೆಯಲ್ಲಿ ಜನವರಿ-2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026 ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ.

ಜನವರಿ 17ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ 9 ಗಂಟೆಗೆ ರಾಜ್ಯ ಮಟ್ಟದ ವಾಲಿಬಾಲ್ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ. ಆಸಕ್ತರು ಈ ಪಂದ್ಯಗಳ ನೋಡಲ್ ಅಧಿಕಾರಿಗಳಾದ ಟಿಪಿಇಓ ಮಾರುತಿ ಮೊ.ಸಂಖ್ಯೆ:9986121146 ಅಥವಾ ದೈಹಿಕ ಶಿಕ್ಷಕರಾದ ಮುಕ್ತರ್ ಅಹ್ಮದ್ ಅವರ ಮೊ.ಸಂಖ್ಯೆ:8050224221ಗೆ ಸಂಪರ್ಕಿಸಿ ತಂಡದ ಹೆಸರು ನೋಂದಾಯಿಸಬಹುದಾಗಿದೆ.

ಜನವರಿ 18ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ 9 ಗಂಟೆಗೆ ಕಬ್ಬಡಿಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ. ಆಸಕ್ತರು ಈ ಪಂದ್ಯಗಳ ನೋಡಲ್ ಅಧಿಕಾರಿಗಳಾದ ದೇವದುರ್ಗದ ಟಿಪಿಇಓ ಮುದುಕನ್ನ ಕವಡಿಮಟ್ಟಿ ಮೊ.ಸಂಖ್ಯೆ: 9448619792 ಅಥವಾ ದೈಹಿಕ ಶಿಕ್ಷಕರಾದ ಉಮೇಶ ಮೊ.ಸಂಖ್ಯೆ: 9448218095ಗೆ ಸಂಪರ್ಕಿಸಿ ತಂಡದ ಹೆಸರು ನೋಂದಾಯಿಸಬಹುದಾಗಿದೆ.

ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್‌ಸೇಟಿನಿಂದ ಜೂನಿಯರ್ ಬ್ಯೂಟಿ ಪ್ರಾಕ್ಟೀಷನರ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜ,7–** ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಜೂನಿಯರ್ ಬ್ಯೂಟಿ ಪ್ರಾಕ್ಟೀಷನರ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 2026ರ ಜನವರಿ 9ರಿಂದ ಪ್ರಾರಂಭವಾಗಿ 35ದಿನಗಳ ಕಾಲ ನಡೆಯಲಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 10 ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ನಗರದಲ್ಲಿ ಜನವರಿ 9ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜ,7–** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾದ ಕಂಡಕ್ಟರಿಂಗ್ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಜನವರಿ 09ರ ಬೆಳಿಗ್ಗೆ 10:30 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಮಾರೆಮ್ಮ ಗುಡಿ, ಬನಶಂಕರಿ ರೊಟ್ಟಿ ಕೇಂದ್ರದಿಂದ ರಾಂಪೂರು ರೋಡ್‌ವರೆಗೆ, ಮಾರೆಮ್ಮ ಗುಡಿ ರಾಂಪೂರು ರೋಡ್, ಬೆಲ್ಲಂ ಕಾಲೋನಿ ಮಿನರಲ್ ವಾಟರ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999, 9480845955 ಮತ್ತು 9448395624ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

**ರಾಯಚೂರು ಜ,7–** ಇಲ್ಲಿನ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರದಲ್ಲಿ ಖಾಲಿ ಇರುವ ನಾಗರಿಕ ಸಮಾಜದ ಸದಸ್ಯರ ಆಯ್ಕೆಗೆ ಅರ್ಜಿ ಅಹ್ವಾನಿಸಲಾಗಿದೆ.

ರಾಜಕೀಯೇತರ, ಸಮಾಜ ಸೇವೆಯಲ್ಲಿ ತೊಡಗಿರುವ ಸಾಮಾಜಿಕ ಬದ್ದತೆಯುಳ್ಳ ಗಣ್ಯ ವ್ಯಕ್ತಿಗಳಾಗಿರುವ ಸಾರ್ವಜನಿಕರು ತಮ್ಮ ವೈಯಕ್ತಿಕ ದಾಖಲಾತಿಗಳೊಂದಿಗೆ ಸವಿವರವನ್ನು ಪೊಲೀಸ್ ಅಧೀಕ್ಷಕರು ರಾಯಚೂರು ಜಿಲ್ಲೆ ಇವರ ಕಚೇರಿಗೆ 15 ದಿನಗಳೊಳಗೆ ಸಲ್ಲಿಸುವಂತೆ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯ್ಕೆ ಸಮಿತಿಗೆ ಪುಸ್ತಕದ ಪ್ರತಿ ಸಲ್ಲಿಸಲು ಜ.31ಕೊನೆಯ ದಿನ

**ರಾಯಚೂರು ಜ,7–**ನೋಂದಣಿ ಕಾಯ್ದೆ ಅನ್ವಯ ಪ್ರಕಾಶಕರು 2025 ರಲ್ಲಿ ಮುದ್ರಿಸಿ ಪ್ರಕಟಿಸಿದ ಮೊದಲ ಆವೃತ್ತಿಯ ಪುಸ್ತಕಗಳ 3 ಪ್ರತಿಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು. ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯು ಅಯ್ಕೆಗಾಗಿ ಸಲ್ಲಿಸಲಾದ 3 ಪ್ರತಿಗಳಲ್ಲಿ ಒಂದನ್ನು ಪರಿಗಣಿಸಲಾಗುತ್ತದೆ.

2025ರಲ್ಲಿ ರಾಜ್ಯದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪ್ರತಿ ಶೀರ್ಷಿಕೆ ಮೂರು ಪ್ರತಿಗಳನ್ನು ಮುಫತ್ತಾಗಿ ಸಲ್ಲಿಸಿ ದಿನಾಂಕ: 31-01-2026ರ ಸಂಜೆ 5.30ರ ಒಳಗಾಗಿ ನೋಂದಣಿ ಮಾಡಿಸತಕ್ಕದ್ದು, ನೋಂದಣಿಯಾದ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಅಂತಿಮ ದಿನಾಂಕದ ನಂತರ ನೋಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗಾಗಿ ಪರಿಗಣಿಸಲಾಗುವುದಿಲ್ಲ.

ಹೊರ ರಾಜ್ಯಗಳಲ್ಲಿ 2025ರಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ/ ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ನೋಂದಣಿ ಪ್ರಮಾಣ ಪತ್ರದ ನಕಲು ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ ಒಂದು ಪ್ರತಿಯನ್ನು ಆಯ್ಕೆಗಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು, ನಿಗದಿತ ದಿನಾಂಕದ ನಂತರ ಸಲ್ಲಿಸುವ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ.

ಸಾಹಿತ್ಯ, ಮಕ್ಕಳ ಸಾಹಿತ್ಯ, ಕಲೆ ಮತ್ತು ವಿಜ್ಞಾನ ಪ್ರಕಾರಗಳ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸಬಹುದಾಗಿದೆ ಎಂದು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರಾದ ಬಸವರಾಜೇಂದ್ರ ಹೆಚ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಜಾನಪದ ಅಕಾಡೆಮಿಯಿಂದ ಫೆಲೋಶಿಪ್‌ಗೆ ಅರ್ಜಿ ಆಹ್ವಾನ

**ರಾಯಚೂರು ಜ,7–** ಕರ್ನಾಟಕ ಜಾನಪದ ಅಕಾಡೆಮಿಯು ಫೆಲೋಶಿಪ್ (ಅಧ್ಯಯನ ವೇತನ) ಲೇಖನಗಳಿಗೆ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಜಾನಪದ ಅಕಾಡೆಮಿಯ ವೆಬ್‌ಸೈಟ್ ವಿಳಾಸ: (https://janapada.karnataka.gov.in) ನಲ್ಲಿ ತಿಳಿಸಿರುವ ಶೀರ್ಷಿಕೆಗಳನ್ನು ಆಧರಿಸಿ ಕ್ಷೇತ್ರಕಾರ್ಯ ನಡೆಸಿ ಅಧ್ಯಯನ ಕೃತಿಗಳನ್ನು ಸಿದ್ಧಪಡಿಸಿಕೊಡಲು ಆಸಕ್ತ ಅಭ್ಯರ್ಥಿಗಳು ನಿಗದಿಪಡಿಸಿರುವ ಒಂದು ಶೀರ್ಷಿಕೆಯನ್ನು ಆಯ್ಕೆ ಮಾಡಿ 5 ಪುಟಗಳ ಸಾರಲೇಖ (ಖಥಿಟಿಠಿ)ವನ್ನು ಬರೆದು ಜನವರಿ 223ರೊಳಗಾಗಿ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, ಎರಡನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು - 560002 ಇವರಿಗೆ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಿಸ್ ಫೈಯರ್‌ನಿಂದ ರಾಜಶೇಖರರೆಡ್ಡಿಗೆ ಗುಂಡು ಬಿದ್ದಿಲ್ಲ



**ಬಳ್ಳಾರಿ, ಜ. 7–** ನಗರದಲ್ಲಿ ಜ.1 ರಂದು ನಡೆದ ಗಲಾಟೆಯಲ್ಲಿ ಫೈರಿಂಗ್‌ನಿಂದ ರಾಜಶೇಖರರೆಡ್ಡಿ ಸಾವನ್ನಪ್ಪಿದ್ದು ಮಿಸ್ಸಿಂಗ್ ಫೈರಿಂಗ್‌ನಿಂದ ಅಲ್ಲ. ಶಾಸಕ ಭರತ್ ರೆಡ್ಡಿ ನಿರ್ದೇಶನದಂತೆ ಅವರ ಖಾಸಗಿ ಗನ್ ಮ್ಯಾನ್‌ನಿಂದ ಉದ್ದೇಶ ಪೂರ್ವಕವಾಗಿ ಶೂಟ್ ಮಾಡಲಾಗಿದೆ ಎಂದು ಮಾಜಿ ಸಚಿವ, ಗಂಗಾವತಿ ಶಾಸಕ ಗಾಲಿ ಜನಾರ್ದನರೆಡ್ಡಿ ಹೇಳಿದ್ದಾರೆ.

ನಗರದ ತಮ್ಮ ನಿವಾಸದಲ್ಲಿಂದು ರಾಜಶೇಖರರೆಡ್ಡಿ ಮೇಲೆ ಫೈರಿಂಗ್ ಮಾಡಿದ ವಿಡಿಯೋ ಪ್ರದರ್ಶಿಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಈ ಫೈರಿಂಗ್ ಗಲಾಟೆಗೂ ಸತೀಶ್ ರೆಡ್ಡಿಗೂ ಸಂಬಂಧಿಸಿದ್ದಲ್ಲ. ಸತೀಶ್ ರೆಡ್ಡಿ ಗಲಾಟೆ ಮಾಡಿಕೊಂಡು 8 ಗಂಟೆ ವೇಳೆಗೆ ತೆರಳಿದ್ದರು.

ರಾತ್ರಿ 9 ಗಂಟೆ ನಂತರ ಬಂದ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಗಾದರೂ ಮಹರ್ಷಿ ವಾಲ್ಮೀಕಿ ಪುತ್ತಳಿ ಸಮಾರಂಭವನ್ನು ನಿಲ್ಲಿಸಿ ನಮ್ಮ ಮೇಲೆ ಅಪಪ್ರಚಾರ ಮಾಡಲು ಬಯಸಿದ್ದರು. ಅದಕ್ಕಾಗಿ ವಾಲ್ಮೀಕಿ ಯುವಕನಿಗೆ ಹೊಡೆದು ಗಲಾಟೆ ಮಾಡಿಸಬೇಕೆಂದು ಬಯಸಿದ್ದರು. ಅವರು ಗನ್ ಮ್ಯಾನ್ ಗೆ ಸೂಚಿಸಿದಂತೆ ದಿನ ನಿತ್ಯ ಅವರ ಕಚೇರಿಗೆ ಬರುತ್ತಿದ್ದ ರಾಜಶೇಖರ ರೆಡ್ಡಿ ಮೇಲೆ ಫೈರಿಂಗ್ ಮಾಡಿದ್ದಾನೆ.

ಗಲಾಟೆ ನಡೆದಾಗ ಇದ್ದ ರಾಜಶೇಖರ ರೆಡ್ಡಿ ಅವರನ್ನು ಗುಂಪಿನಿಂದ ಚದುರಿಸಲು ಸಿವಿಲ್ ಪೊಲೀಸ್ ಒಬ್ಬ ಬೆತ್ತದಿಂದ ಹೊಡೆದು ಕಳಿಸುವಾಗಲೇ ಆತನ ಎದುರಿನಲ್ಲಿ ಗನ್ ಮ್ಯಾನ್ ರಾಜಶೇಖರರೆಡ್ಡಿಗೆ ಗುಂಡು ಹಾರಿಸುತ್ತಾನೆ. ಆತನ ದೇಹ ಮುಟ್ಟಿದ ಪೊಲೀಸ್ ತನ್ನಗಂಟಿದ ರಕ್ತವನ್ನು ಒರೆಸಿಕೊಳ್ಳುತ್ತಾನೆ. ಆತ ಈ ಪ್ರಕರಣದಲ್ಲಿ ಸಾಕ್ಷಿ ಆಗಲಿದ್ದಾನೆ ಎಂದರು.

ಎಎಸ್ಪಿ ರವಿಕುಮಾರ್, ಸಿಟಿ ಡಿಎಸ್ಪಿ ಚಂದ್ರಕಾಂತ ನಂದರೆಡ್ಡಿ ಮತ್ತು ಭರತ್ ರೆಡ್ಡಿ ಸೇರಿ. ಈ ಘಟನೆಯಲ್ಲಿ ಚಾನಾಳ್ ಶೇಖರ್ ನನ್ನು ಕೊಲೆ ಮಾಡಲು ಸಂಚು ಮಾಡಲಾಗಿತ್ತು. ಏಕೆಂದರೆ ಲಿಂಗಾಯತ ಸಮುದಾಯದವರನ್ನು ಮುಗಿಸಿದರೆ ಬಿಜೆಪಿಗೆ ಕೆಟ್ಟ ಹೆಸರು ಬರಲಿದೆ. ಆದರೆ ಆ ಸಂಚು ವಿಫಲವಾಗಿ ರೆಡ್ಡಿ ಸಮುದಾಯದ ರಾಜಶೇಖರರೆಡ್ಡಿಯನ್ನು ಕೊಂದಿದ್ದಾರೆ.

ಕುಡಿದ ಅಮಲಿನಲ್ಲಿ, ಗಾಂಜಾ ಸೇವಿಸಿ ಜನಾರ್ದನರೆಡ್ಡಿ ಮನೆ ಸುಟ್ಟು ಭಸ್ಮ ಮಾಡುತ್ತೇನೆ ಎಂದು ಭರತ್ ರೆಡ್ಡಿ ಹೇಳಿದ್ದಾನೆಂದು ಆರೋಪಿಸಿದರು. ಡಿಕೆಶಿ ಅವರು ನಿನ್ನೆ ಜನಾರ್ದನರೆಡ್ಡಿಗೆ ಗುಂಡು ಬಿತ್ತಾ ಎಂದು ಕೇಳಿದ್ದಾರೆ. ಅಂದರೆ ಅವರು ನನ್ನ ಸಾವನ್ನು ಬಯಸಿದಂತೆ ಇದೆ. ಇಂತಹ ವ್ಯಕ್ತಿ ರಾಜ್ಯದ ಮುಖ್ಯಮಂತ್ರಿ ಆಗುತ್ತಾರೆ ಎಂದರೆ ರಾಜ್ಯದ ಜನ ಆತಂಕದಲ್ಲಿ ಇದ್ದಾರೆ.

**ಜ.17 ಕ್ಕೆ ಪ್ರತಿಭಟನೆ:**ಬಳ್ಳಾರಿಯ ಗಲಾಟೆಯ ಸಂಬಂಧ ಬಿಜೆಪಿ ಪಕ್ಷದಿಂದ ರಾಜ್ಯದ ಮುಖಂಡರೊಂದಿಗೆ ಬೃಹತ್ ಸಮಾವೇಶದ ಪ್ರತಿಭಟನೆ ನಡೆಸಲಿದೆ ಎಂದು ಹೇಳಿದರು.

ಈ ವೇಳೆ ಮಾತನಾಡಿದ ಮಾಜಿ ಸಚಿವ ಶ್ರೀರಾಮುಲು ಮಾತನಾಡಿ, ಮುಖ್ಯ ಮಂತ್ರಿ ಸಿದ್ದರಾಮಯ್ಯ ದೇವರಾಜ ಅರಸು ಅವರ ಆಡಳಿತ ಅವಧಿಯನ್ನು ಮೀರಿಸಿದ್ದಾರೆ. ಇದು ಸ್ವಾಗತವಾದರೂ, ಅರಸು ಅವರಂತೆ ಸಮಾಜಕ್ಕೆ ಇವರ ಕೊಡುಗೆ ಏನು ಎಂದರು.ಬಳ್ಳಾರಿ ಘಟನೆಗೆ ಸಂಬಂಧಿಸಿ ಸತೀಶ್ ರೆಡ್ಡಿ ಯನ್ನು ಬಂಧಿಸಿಲ್ಲ. ಫೈರಿಂಗ್ ಘಟನೆಗೆ ಪ್ರಚೋದನೆ ನೀಡಿದ ಶಾಸಕ ಭರತ್ ರೆಡ್ಡಿ ಅವರನ್ನು ಮತ್ತು ಬೆಂಬಲುಗರನ್ನು ಬಂಧಿಸಬೇಕು ಎಂದು ಆಗ್ರಹಿಸಿದ್ದಾರೆ.

ಸೆಕ್ಷನ್ 100, 107 ಅಡಿ, ಮಹಿಳೆಯರು ಸೇರಿದಂತೆ 33 ಜನ ಬಿಜೆಪಿ ಕಾರ್ಯಕರ್ತರು ಮತ್ತು ಮುಖಂಡರಿಗೆ ಮಾತ್ರ ನೋಟೀಸ್ ನೀಡಿದೆ. ಕಾಂಗ್ರೆಸ್ ಕಡೆಯವರನ್ನು ಏಕೆ ಬಂಧಿಸುತ್ತಿಲ್ಲ ಎಂದು ಪ್ರಶ್ನಿಸಿದರು.

# ನರೇಗಾ ಯೋಜನೆ ಸತ್ಯನಾಶ ಮಾಡಲು ಹೊರಟ ಬಿಜೆಪಿ



**ಯಾದಗಿರಿ:ಜ.7:**ಬಡ ಕಾರ್ಮಿಕರಿಗೆ ಸಹಾಯ ಮಾಡಲೆಂದು ಕಾಂಗ್ರೆಸ್ ಪಕ್ಷ 20 ವರ್ಷಗಳ ಹಿಂದೆ ತಂದಿರುವ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಯನ್ನು ಕೇಂದ್ರದ ಬಿಜೆಪಿ ಸರ್ಕಾರ ಸತ್ಯನಾಶ ಮಾಡಲು ಹೊರಟಿದೆ

ಹೀಗಾಗಿ 2025 ರಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಒಓಖಇಉಂ ಕಾಯ್ದೆ ಹಾಗೂ ಹಕ್ಕು ಸ್ವರೂಪವನ್ನು ತೆಗೆದಾಕಿ ಕೇವಲ ಸರ್ಕಾರದ ಹಣತಿಯ ಯೋಜನೆಗಾಗಿ ಹೊಸದಾಗಿ ವಿಕಾಸಿತ ಭಾರತ ರೋಜ್ಗಾರ್ ಮತ್ತು ಆಜಿವಿಕ್ ಮಿಷನ್ ಗ್ರಾಮೀಣ ಖಾತ್ರಿ, ವಿ ಬಿ ಗ್ರಾಂ ಜಿ ಖಾತೆಯನ್ನು ಜಾರಿಗೊಳಿಸಿದೆ .

ಈ ಹೊಸ ಕಾಯ್ದೆಯಿಂದ ಕೂಲಿಕಾರರ ಮೇಲೆ ಹಲವು ದುಷ್ಪರಿಣಾಮ ಬೀರುತ್ತವೆ ರೈತರ ಋತುವಿನ ಸಂದರ್ಭದಲ್ಲಿ 60 ದಿನಗಳ ಕೃಷಿ ಕೆಲಸ ನಿಬರ್ಂಧಿಸಿದನು ನೋಡಿದರೆ 125 ದಿನಗಳ ಕೆಲಸ ಸಿಗುವುದಿಲ್ಲ ಮತ್ತು ಕೆಲಸದಿಂದ ವಂಚಿತ`ರಾಗುತ್ತಾರೆ.

ಕೇಂದ್ರ ಸರ್ಕಾರ 60% ರಾಜ್ಯ ಸರ್ಕಾರ 40% ರಷ್ಟು ಮತವನ್ನು ಖರ್ಚು ಮಾಡಬೇಕೆಂಬ ಅಂಶಗಳಿಂದ ಕೂಲಿಕಾರ್ರಿಗೆ ಕೇಂದ್ರ ಸರ್ಕಾರವು ರಾಜ್ಯ ಸರ್ಕಾರವು ಹಣ ನೀಡಲ್ಲವೆಂದು ರಾಜ ಸರ್ಕಾರವು ಕೇಂದ್ರ ಸರ್ಕಾರವು ಹಣ ಕೊಟ್ಟಿಲ್ಲವೆಂದು ಹೇಳುವ ಮೂಲಕ ಕೂಲಿಕಾರ್ಮಿಕರನ್ನು ಕೂಲಿಯಿಂದ ವಂಚಿತರಾಗಿ ಮಾಡುತ್ತದೆ. ಎಂದು ಮಂಗಳವಾರದಂದು ಯಾದಗಿರಿ ಜಿಲ್ಲಾ ಅಧಿಕಾರಿ ಕಚೇರಿ ಮುಂದೆ. ಪ್ರತಿಭಟನೆಗೆ ಮುಂದಾಗಿ ಮನವಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರಂಗಮ್ಮ ಕಟ್ಟಿಮನಿ ಜಿಲ್ಲಾ ಉಪಾಧ್ಯಕ್ಷರು. ಮಾದೇವಪ್ಪಪ್ರಕಾಶ್ ಹಲ್ದಾಳ್‌ನಿಂಗಪ್ಪ ಕುಕುರ್‌ಂದಿಗೀತಾ ಹೋತಪೇಠಅನ್ನಪೂರ್ಣ ಪೂಜಾರಿ ಇನ್ನು ಹಲವಾರು ಸಂಘದ ಸದಸ್ಯರು ಉಪಸ್ಥಿತರಿದ್ದರು.

ಯುವ ಮಾರ್ಗ www.yuvamarga.com Yuva Marga yuva_marga_

### ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ

# ಬಹುತೇಕ ಅಧಿಕಾರಿಗಳು, ಸಿಬ್ಬಂದಿಯಲ್ಲಿ ಶಿಸ್ತು ಇಲ್ಲ: ಲೋಕಾಯುಕ್ತರ ಕಾರ್ಯದರ್ಶಿ ಅಸಮಾಧಾನ







ಯುವಮಾರ್ಗ ಸುದ್ದಿ

**ರಾಯಚೂರು,ಜ.7–** ಜಿಲ್ಲೆಯ ಬಹುತೇಕ ಇಲಾಖೆಗಳಲ್ಲಿ ಕಡ್ಡಾಯವಾಗಿ ನಿರ್ವಹಣೆ ಆಗಲೇಬೇಕಾದ ನೌಕರರ ಹಾಜರಾತಿ ವಹಿ, ಚಲನವಹಿ, ನಗದು ವಹಿಗಳನ್ನು ಸರಿಯಾಗಿ ನಿರ್ವಹಿಸದೇ ಲೋಪ ಎಸಗುತ್ತಿರುವುದು ಲೋಕಾ ತಂಡದ ಕಾರ್ಯಾಚರಣೆ ವೇಳೆ ಕಂಡು ಬಂದಿದೆ ಎಂದು ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರ ಕಾರ್ಯದರ್ಶಿಗಳಾದ ಶ್ರೀನಾಥ ಕೆ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಂದ ನಡೆದ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಲೋಕಾ ತಂಡವು ಕಾರ್ಯಾಚರಣೆ ವೇಳೆ ಗಮನಿಸಿದಂತೆ ಬಹುತೇಕ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಗುರುತಿನ ಚೀಟಿ ಧರಿಸದೇ ಕೆಲಸ ನಿರ್ವಹಣೆ ಮಾಡುತ್ತಿದ್ದಾರೆ. ಗ್ರೂಪ್ ಡಿ ಸೇರಿದಂತೆ ಬೇರೆ ಬೇರೆ ಸಿಬ್ಬಂದಿಗೆ ನಿಗದಿಪಡಿಸಿದ ಡ್ರೆಸ್ ಕೋಡ್ ಪಾಲನೆಯಾಗಿಲ್ಲ. ಕಚೇರಿಗೆ ಹೋದಾಗ ಯಾರು ಏನು ಎಂದು ಏನೂ ತಿಳಿಯುವುದಿಲ್ಲ. ಬಹುತೇಕ ಕಚೇರಿಗಳಲ್ಲಿ ನೇಮ್ ಪ್ಲೇಟ್ ಕಾಣಿಸಲಿಲ್ಲ. ಇದು ಕೂಡಲೇ ಸರಿಯಾಗಬೇಕು. ಈ ಬಗ್ಗೆ ಜಿಲ್ಲಾಮಟ್ಟದ ಅಧಿಕಾರಿಗಳು ಕೂಡಲೇ ಕ್ರಮವಹಿಸಬೇಕು ಎಂದು ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಎಲ್ಲ ಕಚೇರಿಗಳಿಗೆ ಸುತ್ತೋಲೆ ರವಾನಿಸಿ ತಿಳಿಸಿದಾಗ್ಯೂ ಲೋಕಾಯುಕ್ತ ಅಧಿಕಾರಿಗಳ ಮಾಹಿತಿಯ ಫಲಕಗಳನ್ನು ಬಹುತೇಕ ಕಚೇರಿಗಳಲ್ಲಿ ಅಳವಡಿಸಿಲ್ಲ. ಸರ್ಕಾರಿ ನೌಕರರಿಗೆ ಅನ್ವಯಿಸುವ ಎಲ್ಲ ನಿಯಮಗಳು ಹೊರಗುತ್ತಿಗೆ ನೌಕರರಿಗು ಸಹ ಅನ್ವಯಿಸುತ್ತವೆ. ಆದಾಗ್ಯೂ ಹೊರಗುತ್ತಿಗೆ ನೌಕರರ ಹಾಜರಾತಿ ವಹಿಯನ್ನು ಬಹುತೇಕ ಕಚೇರಿಗಳಲ್ಲಿ ನಿರ್ವಹಣೆ ಮಾಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ತಪ್ಪಿತಸ್ಥ ಸರ್ಕಾರಿ ನೌಕರರ ಮೇಲೆ ಮೇಲೆ ಕ್ರಮವಹಿಸುವುದಷ್ಟೇ ನಮ್ಮ ಕೆಲಸವಲ್ಲ; ಸರ್ಕಾರದ ಆಡಳಿತ ವ್ಯವಸ್ಥೆಯನ್ನು ಸುಧಾರಿಸುವುದು ಸಹ ನಮ್ಮ ಕಾರ್ಯವಾಗಿದೆ. ಈ ದಿಶೆಯಲ್ಲಿ ತಂಡವು ಭೇಟಿ ನೀಡಿದ ವೇಳೆ ತಿಳಿಸಿದ ಅಂಶಗಳ ಬಗ್ಗೆ ಅರಿತು ಅಧಿಕಾರಿಗಳು ಮತ್ತು ಸಿಬ್ಬಂದಿ ಮಾರ್ಗಸೂಚಿ ಅಂಶಗಳನ್ನು ಪಾಲನೆ ಮಾಡಬೇಕು ಎಂದು ತಿಳಿಸಿದರು. ಜನವರಿ 2 ರಿಂದ ಜನವರಿ 7ರವರೆಗೆ ರಾಯ ಚೂರು ಜಿಲ್ಲೆಯ ವಿವಿಧೆಡೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ ವೇಳೆ ಕಂಡುಬಂದ ಲೋಪಗಳಿಗೆ ಸಂಬಂಧಿಸಿದಂತೆ ಪೊಲೀಸ್ ಹಾಗೂ ನ್ಯಾಯಾಂಗ ಇಲಾಖೆಯ ಅಧಿಕಾರಿಗಳಿಂದ ವರದಿ ಪಡೆದು ತಪ್ಪಿತಸ್ಥರ ಮೇಲೆ ವಿಚಾರಣೆಗೆ ಕ್ರಮವಹಿಸಲಾಗುವುದು. ಗಂಭೀರ ಪ್ರಕರಣ ಎಂದು ಕಂಡುಬಂದಲ್ಲಿ ತಪ್ಪಿತಸ್ಥ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಈಗ ಆಗಿರುವ ಲೋಪಗಳಿಗೆ ಸಂಬಂಧಿಸಿದಂತೆ ಯಾರಾದರು ಅಧಿಕಾರಿಗಳು ಮತ್ತು ಸಿಬ್ಬಂದಿ ತಪ್ಪು ಮಾಹಿತಿ ನೀಡಿದಲ್ಲಿ ಮತ್ತೆ ಜಿಲ್ಲಾ ಲೋಕಾಯುಕ್ತ ಅಧೀಕ್ಷಕರಿಂದ ಪರಿಶೀಲಿಸಿ ವರದಿ ಪಡೆದು ದೂರು ದಾಖಲಿಸುತ್ತೇವೆ ಎಂದು ತಿಳಿಸಿದರು.

ಸೂಕ್ತ ಮಾರ್ಗದರ್ಶನಕ್ಕೆ ವರದಿ: ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವುದಕ್ಕಾಗಿ, ಲೋಕಾ ತಂಡ ಭೇಟಿ ನೀಡಿ ಪರಿಶೀಲಿಸಿ ಪಟ್ಟಿ ಮಾಡಿದ ಲೋಪದೋಷಗಳ ಅಂಶಗಳ ಸಮಗ್ರ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗುವುದು ಎಂದು ಕಾರ್ಯದರ್ಶಿಗಳು ತಿಳಿಸಿದರು.

**ನಮ್ಮ ಹಂತದಲ್ಲೇ ಕ್ರಮ:** ಬೇರೆ ಬೇರೆ ಇಲಾಖೆಗಳಲ್ಲಿನ ಲೋಪದ ಬಗ್ಗೆ ಲೋಕಾಯುಕ್ತರು ನೀಡಿದ ಪಟ್ಟಿಯ ಮೇಲೆ ತಾವು ತಮ್ಮ ಹಂತದಲ್ಲಿ ಆಗುವುದನ್ನು ತ್ವರಿತವಾಗಿ ಸರಿಪಡಿಸುವುದಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದರು. ಶುದ್ಧ ಕುಡಿವ ನೀರಿನ ಘಟಕಗಳ ದುರಸ್ಥಿಗೆ ಹೆಚ್ಚಿನ ಒತ್ತು ಕೊಡುವುದಾಗಿ ಅವರು ಹೇಳಿದರು. ಮುಂದಿನ ವಾರ ಎಲ್ಲ ಅಧಿಕಾರಿಗಳ ಸಭೆ ಕರೆದು ಪುನಃ ಚರ್ಚಿಸುವುದಾಗಿ ತಿಳಿಸಿದರು.

ಇಲ್ಲಿಗೆ ಮುಗಿಯುವುದಿಲ್ಲ: ಲೋಕಾಯುಕ್ತ ಭೇಟಿಯ ಬಿಸಿ ಇಲ್ಲಿಗೆ ಮುಗಿಯುವುದಿಲ್ಲ. ತಪ್ಪಿತಸ್ಥರಿಗೆ ಇನ್ಮುಂದೆ ನೊಟೀಸ್ ಬರುತ್ತವೆ. ಅಧಿಕಾರಿಗಳು ನೊಟೀಸಗಳನ್ನು ಹಗುರವಾಗಿ ಪರಿಗಣಿಸದೇ ಕೂಡಲೇ ಉತ್ತರ ನೀಡಬೇಕು. ಪ್ರಕರಣ ಗಂಭೀರ ಸ್ವರೂಪ ಹೊಂದಿದ್ದಲ್ಲಿ ಕ್ರಿಮಿನಲ್ ಪ್ರಕರಣ ಎದುರಿಸಬೇಕು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಎ.ವಿ.ಪಾಟೀಲ, ರಾಯಚೂರು ಜಿಲ್ಲಾ ಕರ್ನಾಟಕ ಲೋಕಾಯುಕ್ತದ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಲೋಕಾಯುಕ್ತದ ಡಿವೈಎಸ್ಪಿ ರವಿ ಪುರುಷೋತ್ತಮ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸ್ವಾಗತಿಸಿದರು.

# ರಾಯಚೂರಲ್ಲಿ ಲೋಕಾಯುಕ್ತರಿಂದ ಪತ್ರಿಕಾಗೋಷ್ಠಿ

## ಲೋಕಾಯುಕ್ತದಲ್ಲಿ ದೂರುಗಳ ಪ್ರಮಾಣ ಹೆಚ್ಚುತ್ತಿರುವುದು ದುರದೃಷ್ಟಕರ: ಲೋಕಾಯುಕ್ತರ ಕಾರ್ಯದರ್ಶಿ ಶ್ರೀನಾಥ ಕೆ ಕಳವಳ



ಯುವಮಾರ್ಗ ಸುದ್ದಿ

**ರಾಯಚೂರು,ಜ.7–** ಕರ್ನಾಟಕ ಲೋಕಾಯುಕ್ತದಲ್ಲಿ 2022ರಲ್ಲಿ ಇದ್ದ 8000 ಕೇಸಗಳ ಪ್ರಮಾಣವು ಈಗ 2025ರ ಹೊತ್ತಿಗೆ 45,000ಕ್ಕೆ ಏರಿದ್ದು ದುರದೃಷ್ಟಕರ ಎಂದು ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರ ಕಾರ್ಯದರ್ಶಿಗಳಾದ ಶ್ರೀನಾಥ ಕೆ ಅವರು ಕಳವಳ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಂದ ನಡೆದ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಎ.ವಿ.ಪಾಟೀಲ ಅವರೊಂದಿಗೆ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಸರ್ಕಾರದ ಕೆಲಸ ದೇವರ ಕೆಲಸ ಎಂದು ಅರ್ಥೈಸಲಾಗಿದೆ. ಸರ್ಕಾರಿ ನೌಕರಿ ಪಡೆಯುವ ಅಧಿಕಾರಿಗಳು ಮತ್ತು ಸಿಬ್ಬಂದಿ ಅದೃಷ್ಟವಂತರು. ಅವರ ಬಗ್ಗೆ ಸಮಾಜದಲ್ಲಿ ವಿಶೇಷ ಗೌರವ ಇರುತ್ತದೆ. ಆದರೆ, ಇದನ್ನು ಕೆಲವು ಅಧಿಕಾರಿಗಳು ಮತ್ತು ಸಿಬ್ಬಂದಿ ಅರಿಯದೇ ಹಣದ ಆಸೆಗಾಗಿ ಲೋಪ ಎಸಗುತ್ತಿರುವುದು ಕಂಡು ಬರುತ್ತಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ಲೋಪವೆಸಗಿ ವಾರಂಟ್ ಸ್ವೀಕರಿಸುವ ಹಂತಕ್ಕೆ ತಲುಪಿದ್ದು ನೋವಿನ ಸಂಗತಿ ಎಂದು ಅವರು ತಿಳಿಸಿದರು. ಕೆರೆಗಳ ಸುರಕ್ಷತೆಗೆ ಒತ್ತು: ಕೆರೆ ಒತ್ತುವರಿ ಹಿನ್ನೆಲೆಯಲ್ಲಿ 2018ರಲ್ಲೇ ಲೋಕಾಯುಕ್ತದಿಂದ ರಾಜ್ಯದ ಎಲ್ಲ ಕಡೆಗೆ ಕೇಸ್ ದಾಖಲಿಸಲಾಗಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 587 ಕೆರೆಗಳಿದ್ದು, ಜನರ ಜೀವನಾ ಡಿಯಾದ ಈ ಕೆರೆಗಳ ಸುರಕ್ಷತೆಗೆ ಒತ್ತು ಕೊಡಬೇಕು. ಜಿಲ್ಲೆಯಲ್ಲಿ 46 ಕೆರೆಗಳ ಒತ್ತುವರಿ ತಡೆದಿದ್ದೇವೆ ಎಂದು ಅಧಿಕಾರಿಗಳು ವರದಿ ನೀಡಿದ್ದಾರೆ. 319 ಕೆರೆಗಳ ಸರ್ವೆ ನಡೆಸಿದ ಬಗ್ಗೆ ನಕ್ಷೆ ನೀಡಬೇಕು ಎಂದು ಎಡಿಎಲ್ಆರ್ ಅವರಿಗೆ ಸೂಚನೆ ನೀಡಲಾ ಗಿದೆ ಎಂದು ತಿಳಿಸಿದರು.

**155 ಘಟಕ ನಿಷ್ಕ್ರಿಯ; ಅಸಮಾಧಾನ:** ಅರಕೇರಾದಲ್ಲಿ 72, ದೇವದುರ್ಗದಲ್ಲಿ 72, ಲಿಂಗಸಗೂರುದಲ್ಲಿ 114, ಮಸ್ಕಿಯಲ್ಲಿ 66, ರಾಯಚೂರುದಲ್ಲಿ 107, ಸಿಂಧನೂರನಲ್ಲಿ 116 ಮತ್ತು ಸಿರವಾರದಲ್ಲಿ 57 ಸೇರಿ ಜಿಲ್ಲೆಯಲ್ಲಿ ಒಟ್ಟು 716 ಶುದ್ಧ ಕುಡಿವ ನೀರಿನ ಘಟಕಗಳ ಪೈಕಿ 561 ಘಟಕಗಳು ಮಾತ್ರ ಸುಸ್ಥಿತಿಯಲ್ಲಿವೆ. 155 ಘಟಕಗಳು ನಿಷ್ಕ್ರಿಯವಾಗಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ವರದಿ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

**ನಾಯಿಗಳ ಹಾವಳಿ ತಡೆಗೆ ಕ್ರಮವಹಿಸಿ:** ಸಾರ್ವಜನಿಕ ಸ್ಥಳಗಳಲ್ಲಿ ಬೀದಿನಾಯಿಗಳ ಹಾವಳಿ ನಿಯಂತ್ರಿಸಲೇಬೇಕು ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಸೂಚನೆ ನೀಡಿದಾಗ್ಯೂ ರಾಯಚೂರು ನಗರ ಸೇರಿದಂತೆ ಸಿಂಧನೂರ, ಮಾನವಿ, ಲಿಂಗಸೂರು, ದೇವದುರ್ಗ, ಮಸ್ಕಿ, ಸಿರವಾರ, ಅರಕೇರಾ ಯಾವುದೆ ಕಡೆಗಳಲ್ಲಿ ಏನೂ ಕ್ರಮಗಳಾಗದೇ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸುಮ್ಮನಿದ್ದು, ಈ ಬಗ್ಗೆ ಕೂಡಲೇ ಕ್ರಮ ಜರುಗಿಸಿ ವಿವರವಾದ ವರದಿ ನೀಡವೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಬಯಲುಶೌಚ ಮುಕ್ತ ಜಿಲ್ಲೆಯಾಗಲಿ: ಈಗಲು ರೋಡ್ ಪಕ್ಕ ಕುಳಿತು ಬಯಲು ಶೌಚ ಮಾಡುವ ಪರಿಸ್ಥಿತಿ ರಾಯಚೂರು ಸೇರಿದಂತೆ ಈ ಭಾಗದ ಜಿಲ್ಲೆಗಳಲ್ಲಿ ಕಾಣುತ್ತಿದೆ. ರಾಯಚೂರು ಜಿಲ್ಲೆಯಲ್ಲಿ ಶೌಚಾಲಯ ಪರಿಸ್ಥಿತಿಯ ಚಿತ್ರಣ ಸಿಕ್ಕಿಲ್ಲ. ಸಿಇಓ ಅವರಿಂದ ಮಾಹಿತಿ ಪಡೆದು ಪರಿಶೀಲಿಸುತ್ತೇವೆ ಎಂದು ಅವರು ತಿಳಿಸಿದರು.

ಚೆಕ್‌ಪೋಸ್ಟಗಳ ಮೇಲೆ ನಿಗಾ: ಬೀದರ ಜಿಲ್ಲೆಯ ಹುಮನಾಬಾದ್ ಬಳಿಯ ಚೆಕ್‌ಪೋಸ್ಟ್ ಮೂಲಕ ಸಂಚರಿಸುವ ವಾಹನಗಳ ಚಾಲಕರಿಂದ ಕೆಲವು ಆರ್‌ಟಿಓ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಡಹಗಲೇ ಅನಧೀಕೃತವಾಗಿ ಹಣ ವಸೂಲಿ ಮಾಡುವ ಕೃತ್ಯವನ್ನು ನಮ್ಮ ಲೋಕಾ ತಂಡವು ಬೇಧಿಸಿದೆ. ಈ ಬಗ್ಗೆ ಎಫ್‌ಐಆರ್ ದಾಖಲಿಸಿದೆ. ಈ ಜಾಲ ಎಲ್ಲಾ ಕಡೆ ಇರಬಹುದು ಎಂದು ಯೋಚಿಸಿ ರಾಯಚೂರು ಚೆಕ್ ಪೋಸ್ಟಗಳ ಮೇಲೆ ನಿಗಾ ಇಡಲಾಗುವುದು ಎಂದು ಶ್ರೀನಾಥ ಕೆ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಲೋಕಾಯುಕ್ತದ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಹಾಗೂ ಇನ್ನಿತರರು ಇದ್ದರು.

# ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜ,7–** ಅಲೆಮಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಾಮಾಜಿಕ, ಶೈಕ್ಷಣಿಕ, ಮತ್ತು ಆರ್ಥಿಕ, ಸ್ಥಿತಿಗತಿ ಉತ್ತಮ ಪಡಿಸಲು ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ರಚಿಸಲಾಗಿದ್ದು, ಈ ಸಮಿತಿಗೆ 05 ಜನ ಸಮುದಾಯದ ಪ್ರತಿನಿಧಿಗಳನ್ನು ನಾಮ ನಿರ್ದೇಶನಕ್ಕೆ ಅಲೆಮಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜಾತಿಯ ಆಸಕ್ತಿಯುಳ್ಳ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಮಿತಿಗೆ ನಾಮನಿರ್ದೇಶಿತ ಸದಸ್ಯರಾಗಲು ಇಚ್ಛಿಸಿದಲ್ಲಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿ ರಾಯಚೂರುನಲ್ಲಿ ಅರ್ಜಿಯನ್ನು ಜನವರಿ 12ರಿಂದ ಪಡೆದು ಭರ್ತಿ ಮಾಡಿ ಜನವರಿ 31ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ ನಗರ: ಇಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜ,7–**ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ–01ರ ವ್ಯಾಪ್ತಿಯ ಮಲಿಯಾಬಾದ್110 ಕೆ.ವಿ ವಿದ್ಯುತ್ ಉಪ ಕೇಂದ್ರದಲ್ಲಿ ಬರುವರಿ ಕಂಡಕ್ಟರಿಂಗ್ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವದರಿಂ ಜನವರಿ 8ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ01 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 10ಗಂಟೆಯಿಂದ ಮಾನಸನಗರ, ಮಂತ್ರಾಲಯಂ ರೋಡ್, ಯಂಕಣ್ಣ ಸ್ವಿಮ್ಮಿಂಗ್ ಪೂಲ್, ಬೃಂದಾನವ ಕಲ್ಯಾಣ ಮಂಟಪ, ರೇಸ್ ಸ್ಕೂಲ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999, 9480845955 ಅಥವಾ 9448395621ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ–01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿಶೇಷ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜ,7–**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಬಿ.ಎಡ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಸೇವಾಸಿಂಧು ಪೋರ್ಟ್ಲನ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯಭ್ಯರ್ಥಿಗಳು ಎನ್‌ಸಿಟಿಇಯಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿರುವ ಮುಸ್ಲಿಂ ಕ್ರಿಶ್ಚಿಯನ್, ಜೈನ್ ಸಿಖ್, ಬೌದ್ಧ್ ಹಾಗೂ ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಗೆ 25,000 ರೂ.ಗಳ ವಿಶೇಷ ಪ್ರೋತ್ಸಾಹಧನ ಬ್ಯಾಂಕ್ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು.

ಈ ಬಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ವಿಳಾಸ: https://sevasindhu.karnataka.gov.in ನಲ್ಲಿ ಜನವರಿ 15ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂಖ್ಯೆ: 8277799990 ಹಾಗೂ ಇಲಾಖಾ ವೆಬ್ ಸೈಟ್: https://dom.karnataka.gov.in ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H